ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೯೯

**ಪಟ್ಟಿ – ೦೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೇಯ ಅಧಿವೇಶನ**

**ಬುಧವಾರ, ದಿನಾಂಕ : ೦೩ನೇ ಫೆಬ್ರವರಿ, ೨೦೨೧**

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೬. ಕೃಷಿ ಸಚಿವರು.

## ಬೀದರ್ ಜಿಲ್ಲೆಯ ವಸತಿಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೮ (೩೭೬) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಜಿಲ್ಲೆಯಲ್ಲಿ ಸೂರಿಲ್ಲದವರಿಗೆ ವಸತಿ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; ಇನ್ನು ಎಷ್ಟು ವಸತಿ ರಹಿತರಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ರೈತರ ಕೃಷಿ ಉಪಕರಣ ಹಾಗೂ ಅತಿವೃಷ್ಠಿ/ ಅನಾವೃಷ್ಠಿ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೯ (೩೭೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಕೃಷಿ ಇಲಾಖೆಯಲ್ಲಿ ೨೦೧೮ ರಿಂದ ೨೦೨೧ರವರೆಗೆ ರೈತರಿಗೆ ವಿತರಿಸಲಾಗಿರುವ ಕೃಷಿ ಉಪಕರಣಗಳು ಎಷ್ಟು ; (ವಿತರಿಸಿದ ಸಂಪೂರ್ಣ ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ೨೦೧೯–೨೦ನೇ ಸಾಲಿನಲ್ಲಿ ಅತಿವೃಷ್ಠಿ ಮತ್ತು ಅನಾವೃಷ್ಠಿಯಿಂದ ಆಗಿರುವ ನಷ್ಟ ಎಷ್ಟು; (ವಿವರವಾದ ಮಾಹಿತಿ ನೀಡುವುದು) ಹಾನಿಯಾದ ರೈತರಿಗೆ ನೀಡಲಾದ ಪರಿಹಾರವೆಷ್ಟು ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಮುಜರಾಯಿ ದೇವಸ್ಥಾನದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦ (೩೭೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ಶ್ರೀ ನರಸಿಂಹ ಝರಣಿ/ಮೈಲಾರ್ ಮಲ್ಲಣಾ ದೇವಸ್ಥಾನ, ಜಿಲ್ಲೆಯ ಇತರೆ ದೇವಸ್ಥಾನಗಳ ಅಭಿವೃದ್ಧಿ ಹಾಗೂ ಭಕ್ತಾಧಿಗಳ ಸೌಲಭ್ಯಕ್ಕಾಗಿ ಘೋಷಣೆಯಾದ ಯೋಜನೆಗಳಾವುವು; ಇವುಗಳಲ್ಲಿ ಮಂಜೂರಾದ ಯೋಜನೆಗಳು ಯಾವುವು; ಈ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು ಹಾಗೂ ಬಳಕೆಯಾಗಿರುವ ಅನುದಾನ ಎಷ್ಟು ;

(ಆ) ಜಿಲ್ಲೆಯ ದೇವಸ್ಥಾನದ ಭಕ್ತಾಧಿಗಳಿಗಾಗಿ ನೀಡಲಾಗಿರುವ ಮೂಲ ಸೌಲಭ್ಯಗಳಾವುವು ?

## ಬೀದರ್ ಜಿಲ್ಲೆಯಲ್ಲಿ ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಂಡ ಯೋಜನೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧ (೩೭೫) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಿದ ಯೋಜನೆಗಳಾವುವು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿರುವ ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನಲ್ಲಿ ಮತ್ಸ್ಯ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಮನೆಗಳೆಷ್ಟು ; (ವಿವರವಾದ ಮಾಹಿತಿ ಒದಗಿಸುವುದು)

(ಇ) ಜಿಲ್ಲೆಯಲ್ಲಿ ಮೀನು ಉತ್ಪಾದನೆ ಹೆಚ್ಚಿಸುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ಒದಗಿಸುವುದು)

(ಈ) ಜಿಲ್ಲೆಯಲ್ಲಿ ಇಲ್ಲಿಯವರೆಗೆ ಕೆರೆಗಳ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ? (ವಿವರವಾದ ಮಾಹಿತಿ ಒದಗಿಸುವುದು)

## ರೈತರ ಹಿತಕ್ಕಾಗಿ ಬೆಳೆಯನ್ನು ಖರೀದಿ ಮಾಡುವುದಕ್ಕೆ ತೊಗರಿ ಬೆಳೆ ಬೋರ್ಡ್ ಮಾದರಿ ಮೆಣಸಿನಕಾಯಿ ಬೋರ್ಡ್ ಮಾಡುವ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೨ (೨೭೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಬಳ್ಳಾರಿ ಜಿಲ್ಲೆಯ ಅತೀ ಪ್ರಮುಖ ಬೆಳೆಯಾದ ಮೆಣಸಿನಕಾಯಿ ಬೆಳೆ ಎಷ್ಟು ಉತ್ಪಾದನೆಯಾಗಿದೆ ;

(ಆ) ಈ ಹಿನ್ನೆಲೆಯಲ್ಲಿ ರೈತರ ಹಿತಕ್ಕಾಗಿ ಬೆಳೆಯನ್ನು ಖರೀದಿ ಮಾಡುವುದಕ್ಕೆ ತೊಗರಿ ಬೆಳೆ ಬೋರ್ಡ್ ಮಾದರಿ ಮೆಣಸಿನಕಾಯಿ ಬೋರ್ಡ್ ಮಾಡಲು ಸರ್ಕಾರ ಚಿಂತಿಸಿದೆಯೇ ;

(ಇ) ಇಲ್ಲವಾದಲ್ಲಿ, ಪರ್ಯಾಯ ವ್ಯವಸ್ಥೆ ಏನು ? (ಸಂಪೂರ್ಣ ಮಾಹಿತಿ ನೀಡುವುದು)

## ವಸತಿ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩೩ (೩೬೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಗೆ ಕಳೆದ ಐದು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳ ಗುರಿಯನ್ನು ಮಂಜೂರು ಮಾಡಲಾಗಿದೆ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಆ) ಜಿಲ್ಲೆಗೆ ಮಂಜೂರು ಮಾಡಲಾದ ಮನೆಗಳ ಗುರಿಮುಟ್ಟಲು ಗ್ರಾಮ ಪಂಚಾಯಿತಿಗಳು ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಿರುತ್ತವೆ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಇ) ಆಯ್ಕೆ ಮಾಡಲಾದ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಬಿಡುಗಡೆ ಮಾಡಲಾದ ಹಣ ಎಷ್ಟು; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಈ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮದ್ದೂರು ತಾಲ್ಲೂಕಿನ ಗ್ರಾಮ ಪಂಚಾಯಿತಿಗಳ ಅನುದಾನ ಬಿಡುಗಡೆ ಸಂಬಂಧ ನಿಗಮದಿಂದ Vijil Appನಲ್ಲಿ ಆಯ್ಕೆ ಮಾಡಲಾಗಿರುವ ಫಲಾನುಭವಿಗಳ ಗುರಿಗೆ ಎದುರಾಗಿ, ಗ್ರಾಮ ಪಂಚಾಯಿತಿಯು ಜಿಪಿಎಸ್ ಮಾಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಪಂಚಾಯಿತಿವಾರು, ಫಲಾನುಭವಿವಾರು ವಿವರ ಒದಗಿಸುವುದು)

(ಉ) ನಿಗಮವು ಫಲಾನುಭವಿಗಳನ್ನು Vijil Appನಲ್ಲಿ ಆಯ್ಕೆ ಮಾಡಿದ್ದರೂ ಸಹ ಗ್ರಾಮ ಪಂಚಾಯಿತಿಯು ನಿಗಧಿತ ಸಮಯದೊಳಗೆ ಜಿಪಿಎಸ್ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಜಿಪಿಎಸ್ ಮಾಡದಿರಲು ಕಾರಣವೇನು; ಇದರಿಂದಾಗಿ ಫಲಾನುಭವಿಗಳಿಗೆ ತೊಂದರೆಯಾಗುವುದಿಲ್ಲವೇ; ನಿಗಧಿತ ಸಮಯದೊಳಗೆ ಜಿಪಿಎಸ್ ಮಾಡದ ಅಧಿಕಾರಿಗಳ ವಿರುದ್ಧ ಯಾವ ಕ್ರಮಕೈಗೊಳ್ಳಲಾಗುವುದು ?

## ನಾಗಮಂಗಲ ತಾಲ್ಲೂಕಿನ ರಾಜ್ಯ ಹೆದ್ದಾರಿ ರಸ್ತೆಗಳ ಅಭಿವೃದ್ಧಿಪಡಿಸುವ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೪ (೩೬೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಲೆಕ್ಕ ಶೀರ್ಷಿಕೆ:೫೦೫೪–೦೪–೩೩೭–೦–೦೧–೧೫೪ರಡಿ ನಾಗಮಂಗಲ ತಾಲ್ಲೂಕಿನ ಕಾಂತಾಪುರ ಮಾರ್ಗ ರಾಜ್ಯ ಹೆದ್ದಾರಿ೧೯(ಎನ್.ಹೆಚ್–೧೫೦ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯರಸ್ತೆ ಮತ್ತು ನಾಗಮಂಗಲ ತಾಲ್ಲೂಕು ದೇವಲಾಪುರ ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯು ರಾಜ್ಯ ಹೆದ್ದಾರಿ ರಸ್ತೆಯು ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ರೂ.೭೫೦.೦೦ ಲಕ್ಷಗಳಿಗೆ ಕಾಮಗಾರಿ ಮತ್ತು ಕೋಳಾಲ–ತುರುವೇಕೆರೆ–ದಬ್ಬೇಘಟ್ಟ ರಸ್ತೆಯು

(ಎಂ.ಡಿ.ಆರ್) ಸರಪಳಿ ೦.೦೦ ರಿಂದ ೫೪.೦೦ ಕಿ.ಮೀ.ವರೆಗೆ ಕಾಮಗಾರಿಯನ್ನು ೧೮೦೦.೦೦ ಲಕ್ಷಗಳಿಗೆ ಕಾಮಗಾರಿ ಮಂಜೂರಾಗಿ ಪ್ರಸ್ತುತ ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದಿದ್ದರೂ ಇನ್ನೂ ಕಾಮಗಾರಿ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಗುಣಮಟ್ಟ ಪರಿಶೀಲಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ; (ವಿವರ ನೀಡುವುದು)

(ಇ) ಕಾಮಗಾರಿ ವಿಳಂಬದಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತುರ್ತು ಕಾಮಗಾರಿಯನ್ನು ಗುಣಮಟ್ಟದಿಂದ ಪೂರ್ಣಗೊಳಿಸುವುದು ಯಾವಾಗ; (ವಿವರ ನೀಡುವುದು)

(ಈ) ಸಂಬಂಧಪಟ್ಟ ಗುತ್ತಿಗೆದಾರರು ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಗೋಮಾಳ ಜಮೀನುಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೫ (೩೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಬರುವ ಒಟ್ಟು ಗ್ರಾಮತಾಣಾ ದನಗಳಿಗೆ ಮುಫತ್ತು ಗೋಮಾಳ, ಹುಲ್ಲುಬನಿ, ಗುಂಡುತೋಪು, ಖರಾಬು ಗುಡ್ಡ, ಎ–ಖರಾಬು ಮತ್ತು ಬಿ–ಖರಾಬು ಜಾಗಗಳೆಷ್ಟು; (ಗ್ರಾಮವಾರು ವಿಭಾಗವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯ ವ್ಯಾಪ್ತಿಗೆ ಬರುವ ಕಂದಾಯ ಇಲಾಖೆಗೆ ಒಳಪಡುವ ಜಮೀನನ್ನು ಖಾಸಗಿಯುವರು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ಒತ್ತುವರಿಯಾಗಿರುವ ಜಮೀನುಗಳ ಪೂರ್ಣ ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಗ್ರಾಮಗಳಿಗೆ ಸ್ಮಶಾಣ ಭೂಮಿ ಮಂಜೂರಾಗಿದೆ; ಹಾಗೂ ಸ್ಮಶಾಣ ಭೂಮಿ ಇಲ್ಲದ ಗ್ರಾಮಗಳಿಗೆ ಭೂಮಿ ಮಂಜೂರು ಮಾಡಲು ಸರ್ಕಾರ ಕೈಗೊಂಡಕ್ರಮಗಳೇನು ?

## ಜಮೀನಿನ ದುರಸ್ಥಿ ಕಾರ್ಯ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೬ (೩೬೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕು ಕೊಪ್ಪ ಹೋಬಳಿ ಕೋಣಸಾಲೆ ಗ್ರಾಮದ ಸರ್ವೆ ನಂ.೩೧ರಲ್ಲಿ ಎಷ್ಟು ಸರ್ಕಾರಿ ಜಮೀನಿದೆ; ಈ ಪೈಕಿ ಯಾವ ವರ್ಷದಂದು ಯಾರ್ಯಾರಿಗೆ ಎಷ್ಟೆಷ್ಟು ಜಮೀನು ಮಂಜೂರು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ಜಮೀನುಗಳಲ್ಲಿ ಹಾಲಿ ಮಂಜೂರುದಾರರು ಹಾಗಿದ್ದಲ್ಲಿ, ಎಷ್ಟು ವರ್ಷ ಅನುಭೋಗದಲ್ಲಿದ್ದಾರೆ ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಜಮೀನುಗಳಲ್ಲಿ ಎಷ್ಟು ಮಂಜೂರುದಾರರಿಗೆ ಅವರ ಜಮೀನು ದುರಸ್ಥಿ ಕಾರ್ಯವನ್ನು ಯಾವಾಗ ಮಾಡಿಕೊಡಲಾಗಿದೆ; ಬಾಕಿ ಇರುವವರಿಗೆ ಯಾವಾಗ ದುರಸ್ಥಿ ಕಾರ್ಯ ಮಾಡಿಕೊಡಲಾಗುವುದು ? (ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಇರುವ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೭ (೩೬೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೯–೨೦ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಮರಿಗಳನ್ನು ಕೆರೆಗಳಲ್ಲಿ ಸಾಕಣೆ ಮಾಡಲು ಅನುಸರಿಸಲಾಗಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ನೀಡಿರುವ ಅನುದಾನವೆಷ್ಟು; (ವರ್ಷವಾರು ಹಾಗೂ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ಟೆಂಡರ್ ಕರೆಯಲಾಗಿದೆ; (ವರ್ಷವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಅವಧಿಯಲ್ಲಿ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಅನುದಾನವನ್ನು ನೀಡಲಾಗಿದೆ; (ವರ್ಷವಾರು ಹಾಗೂ ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ೨೦೧೯-೨೦ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮತ್ಸಾಶ್ರಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿರುವ ಮನೆಗಳೆಷ್ಟು; ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು ? (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ದೇವದುರ್ಗ ತಾಲ್ಲೂಕಿನ ರಸ್ತೆ ಕಾಮಗಾರಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩೮ (೨೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ದೇವದುರ್ಗದಿಂದ ಗೂಗಲ್ ಮತ್ತು ಗೂಗಲ್‌ನಿಂದ ಸಂಕೇಶ್ವರಾಳ ರಸ್ತೆ ಕಾಮಗಾರಿ ಕಳೆದ ೪ ವರ್ಷಗಳಿಂದ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಸ್ತೆ ಕಾಮಗಾರಿ ವಿಳಂಬವಾಗುವುದಕ್ಕೆ ಕಾರಣವೇನು; ಮತ್ತು ರಸ್ತೆ ಕಾಮಗಾರಿಯನ್ನು ತ್ವರಿತ ಗತಿಯಲ್ಲಿ ಕೈಗೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು ?

## ನೇಮಕಾತಿಯಲ್ಲಿ ಅಕ್ರಮ ವೆಸಗಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೯ (೨೯೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿ ನೇಮಕಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರವು ಶ್ರೀ ಮುನೇಶ್ ಮುದಗಲ್ ಅವರ ಅಧ್ಯಕತೆಯಲ್ಲಿ ದಿ:೦೩.೦೩.೨೦೧೮ರಂದು ಒಂದು ಸಮಿತಿ ಮಾಡಿದ್ದು, ಅದು ಯಾವ ಹಂತದಲ್ಲಿದೆ ;

(ಇ) ನೇಮಕಾತಿಯಲ್ಲಿ ಅಕ್ರಮವೆಸಗಿರುವ ಅಧಿಕಾರಿಗಳ ಮೇಲೆ ಮತ್ತು ನೇಮಕಾತಿ ಪಡೆದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ?

## ಕಾಮಗಾರಿ ಗುಣ ನಿಯಂತ್ರಣ ಕಾರ್ಯಪಡೆಯ ಶಿಫಾರಸ್ಸುಗಳ ಬಗ್ಗೆ

**ಶ್ರೀಮತಿ ಭಾರತಿಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೨೪೦ (೩೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಮಗಾರಿ ಗುಣ ನಿಯಂತ್ರಣ ಕಾರ್ಯಪಡೆಯು ೨೦೦೪ರಲ್ಲಿ ಸಲ್ಲಿಸಿದ ವರದಿಯ ಶಿಫಾರಸ್ಸುಗಳನ್ನು ಜಾರಿಗೆ ತರಲಾಗಿದೆಯೇ ; ಹಾಗಿದ್ದಲ್ಲಿ, ಜಾರಿಗೆ ತಂದಿರುವ ಶಿಫಾರಸ್ಸುಗಳ ವಿವರ ನೀಡುವುದು ;

(ಆ) ಜಾರಿಗೆ ತರಲಾಗದಿರುವ ಶಿಫಾರಸ್ಸುಗಳು ಯಾವುವು; ಇದಕ್ಕೆ ಕಾರಣಗಳೇನು ?

## ಅತಿವೃಷ್ಟಿ ಮತ್ತು ಅನಾವೃಷ್ಟಿ ಬಗ್ಗೆ

**ಶ್ರೀಮತಿ ಭಾರತಿಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೨೪೧ (೩೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಹಾಗೂ ಮುಂದಿನ ೩ ವರ್ಷಗಳ ಕಾಲ ಯಾವ ರೀತಿಯ ಋತುಮಾನವನ್ನು ವೈಜ್ಞಾನಿಕವಾಗಿ ಅಂದಾಜಿಸಲಾಗಿದೆ ; (ವಿವರ ಒದಗಿಸುವುದು)

(ಆ) ಅತಿವೃಷ್ಟಿ ಮತ್ತು ಅನಾವೃಷ್ಟಿಗಳು ಉಂಟಾದಲ್ಲಿ ಯಾವ ರೀತಿಯ ಸಿದ್ಧತೆಗಳನ್ನು ಸರ್ಕಾರ ಹೊಂದಿದೆ; ಈ ಬಗ್ಗೆ ಸರ್ಕಾರದ ಚೆಕ್ ಲಿಸ್ಟ್‌ಗಳೇನು ;

(ಇ) ನಾಗರೀಕ ಸಿದ್ಧತೆ ಬಗ್ಗೆ ಅನುಸರಿಸಬೇಕಾಗಿರುವ ವಿಧಿ–ವಿಧಾನಗಳೇನು ;

(ಈ) ಪ್ರಾಣಿಗಳ ಬಗ್ಗೆ ಸಿದ್ಧತೆಗಳೇನು ;

(ಉ) ಇಲ್ಲಿಯವರೆಗೆ ಅನುಭವ ಕಲಿಸಿರುವ ಪಾಠಗಳೇನು ? (ವಿವರ ಒದಗಿಸುವುದು)

## ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಗೆ ಅನುದಾನ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨ (೩೮೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಮಂಜೂರಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಅನುದಾನದಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇದಕ್ಕಾಗಿ ಖರ್ಚಾಗಿರುವ ಹಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳಲ್ಲಿ ಕೈಗೊಳ್ಳದೆ ಬೇರೆ ಬೇರೆ ಕಡೆಗಳಲ್ಲಿ ಕೈಗೊಂಡಿರುವ ನಿರ್ದೇಶನಗಳಿವೆಯೇ ; ಇದಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬಡವರಿಗೆ ಸೂರು ಒದಗಿಸುವುದು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೩ (೩೮೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಪ್ರತಿ ಯೊಬ್ಬರಿಗೂ ಸೂರು" ಎಂಬ ಕಾರ್ಯಕ್ರಮ ರಾಜ್ಯದಲ್ಲಿ ಜಾರಿಯಲ್ಲಿದೆಯೇ; ಬಡವರಿಗೆ ಸೂರು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳಾವುವು ;

(ಆ) ಇದುವರೆಗೂ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಈ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳನ್ನು ಗುರುತಿಸಲಾಗಿದೆ ; ಅದರಲ್ಲಿ ಎಷ್ಟು ಫಲಾನುಭವಿಗಳಿಗೆ ವಸತಿ ಹಂಚಿಕೆ ಮಾಡಲಾಗಿದೆ ;

(ಇ) ಬಡವರಿಗೆ ವಸತಿ ಹಂಚಿಕೆ ಮಾಡಲು ಚಾಲ್ತಿಯಲ್ಲಿರುವ ಇತರೆ ಯೋಜನೆಗಳು ಯಾವುವು ? (ವಿವರ ನೀಡುವುದು)

## ಕೃಷಿ ಉತ್ಪಾದನೆ ಹೆಚ್ಚಿಸಲು ಕಾರ್ಯಕ್ರಮ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೪ (೩೮೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೀರು ಮತ್ತು ಗೊಬ್ಬರಗಳ ಸದ್ಬಳಕೆಯಿಂದ ಕೃಷಿ ಉತ್ಪಾದನೆಯನ್ನು ಹೆಚ್ಚಸಲು ಸಾಮರ್ಥ್ಯ ಅಭಿವೃದ್ಧಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಇಲಾಖೆ ಹಮ್ಮಿಕೊಂಡಿದೆಯೇ ;

(ಆ) ಸದರಿ ಕಾರ್ಯಕ್ರಮಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ; ರಾಜ್ಯಾದ್ಯಂತ ಎಷ್ಟು ಪ್ರಾತ್ಯಕ್ಷಿಕೆಗಳನ್ನು ನಡೆಸಲಾಗಿದೆ;

(ಇ) ಈ ಕಾರ್ಯಕ್ರಮಗಳಿಂದ ಉಪಯೋಗ ಪಡೆದುಕೊಂಡ ರೈತರುಗಳ ಸಂಖ್ಯೆ ಎಷ್ಟು ?

## ಮುಜರಾಯಿ ದೇವಸ್ಥಾನಗಳ ಸ್ಥಿರಾಸ್ತಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫ (೩೩೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು ; (ತಾಲ್ಲೂಕುವಾರು ಮತ್ತು ದೇವಸ್ಥಾನವಾರು ವಿವರ ನೀಡುವುದು)

(ಆ) ಈ ದೇವಾಲಯುಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆಷ್ಟು; ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪ್ರಕರಣವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿರುವ ಮುಜುರಾಯಿ ದೇವಾಲಯಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು; ಈ ದೇವಸ್ಥಾನಗಳ ಉಸ್ತುವಾರಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಖರ್ಚಾಗಿರುವ ಮೊತ್ತವೆಷ್ಟು ? (ಪ್ರತಿ ದೇವಸ್ಥಾನದ ವಿವರ ನೀಡುವುದು)

## ಭೂ ಚೇತನ ಕಾರ್ಯಕ್ರಮದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೬ (೩೪೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೂ ಚೇತನ ಕಾರ್ಯಕ್ರಮ ಜಾರಿ ಬಂದನಂತರ ಇಳುವರಿ ಪ್ರಮಾಣ ಎಷ್ಟಾಗಿದೆ; ಈ ಹಿಂದಿನ ಇಳುವರಿ ಪ್ರಮಾಣಕ್ಕೆ ಹೋಲಿಸಿದ್ದಲ್ಲಿ, ಭೂ ಚೇತನ ಕಾರ್ಯಕ್ರಮದಿಂದ ರೈತರಿಗೆ ಅನುಕೂಲವಾಗಿದೆಯೇ; ಪ್ರಸ್ತುತ ಸದರಿ ಕಾರ್ಯಕ್ರಮ ಮುಂದುವರೆಸಲಾಗಿದೆಯೇ ; ಅಥವಾ ವಿನೂತನ ಕಾರ್ಯಕ್ರಮದಲ್ಲಿ ವಿಲೀನಗೊಳಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ರೈತ ಸಿರಿ ಯೋಜನೆಯಡಿ ಬೆಳೆಗಾರರನ್ನು ಉತ್ತೇಜಿಸಲು ಇಲ್ಲಿಯವರೆಗೆ ಹಾಸನ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು; ಸದರಿ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಅನುದಾನ ನೀಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಮೀನುಮರಿ ಉತ್ಪಾದನೆ ಕೇಂದ್ರ ಸ್ಥಾಪಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪೭ (೩೩೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿ ಮೀನುಗಾರಿಕೆ ನಡೆಸಲು ಲಭ್ಯವಿರುವ ಮೀನುಗಾರಿಕೆ ಇಲಾಖೆ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗೊಳಪಡುವ ಜಲ ಸಂಪನ್ಮೂಲಗಳು ಯಾವುವು; (ಮಾಹಿತಿ ನೀಡುವುದು) ಸದರಿ ಜಲಸಂಪನ್ಮೂಲಗಳನ್ನು ಯಾವ ರೀತಿ ಅಭಿವೃದ್ಧಿ ಪಡಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಲಸಂಪನ್ಮೂಲಗಳನ್ನು ಅಭಿವೃದ್ಧಿಪಡಿಸಲು ವಾರ್ಷಿಕವಾಗಿ ಅಗತ್ಯವಿರುವ ಮೀನುಮರಿಗಳ ಪ್ರಮಾಣ ಎಷ್ಟು ಮತ್ತು ಹಾಸನ ಜಿಲ್ಲೆಗೆ ಇಲಾಖೆಯಿಂದ ವಾರ್ಷಿಕವಾಗಿ ಸರಬರಾಜು ಆಗುತ್ತಿರುವ ಮೀನುಮರಿಗಳ ಪ್ರಮಾಣವೆಷ್ಟು ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಮೀನುಗಾರಿಗಳಿಗೆ ಬಹಳ ಬೇಡಿಕೆ ಇದ್ದು, ಮೀನುಮರಿ ಉತ್ಪಾದನೆ ಮಾಡಲು ಅನುಕೂಲಕರ ಸ್ಥಳಗಳಿದ್ದರೂ ಸಹ ಜಿಲ್ಲೆಯಲ್ಲಿ ಮೀನುಮರಿ ಉತ್ಪಾದನೆ ಕೇಂದ್ರ ಸ್ಥಾಪನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಪ್ರದೇಶದಲ್ಲಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡಲಾಗುವುದು; ಯಾವ ಕಾಲಮಿತಿಯೊಳಗೆ ಉತ್ಪಾದನಾ ಕೇಂದ್ರ ಮಾಡಿ ರೈತರಿಗೆ ಮೀನುಮರಿಗಳನ್ನು ಸರಬರಾಜು ಮಾಡಲಾಗುವುದು ? (ವಿವರ ನೀಡುವುದು)

## ಭೂ ಪರಿವರ್ತನೆ ಕೋರಿ ಬಂದಿರುವ ಅರ್ಜಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೮ (೩೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಭೂ ಪರಿವರ್ತನೆಗಾಗಿ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ; ಯಾವ ಯಾವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು; (ಪ್ರಕರಣವಾರು ವಿವರ ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕೈಗಾರಿಕೆಯನ್ನು ಸ್ಥಾಪಿಸುವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು ; (ವಿವರವನ್ನು ಪ್ರಕರಣವಾರು ಒದಗಿಸುವುದು)

(ಇ) ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು)

(ಈ) ಕರ್ನಾಟಕ ಭೂಕಂದಾಯ ಅಧಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು ;

(ಉ) ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು ? (ವಿವರ ನೀಡುವುದು)

## ಭೂ ಖರೀದಿದಾರರಿಗೆ ನಮೂನೆ –೯ ಹಾಗೂ ೧೧–ಬಿ ನೀಡುವ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೯ (೩೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭೂ–ಪರಿವರ್ತನೆಯಾದ ಜಾಗವನ್ನು ನಮೂನೆ–೧೧ಬಿ ಮೂಲಕ ಖರೀದಿಸಿದ್ದರೂ ನಮೂನೆ–೯ ಹಾಗೂ ೧೧–ಎ ನೀಡುವುದನ್ನು ರಾಜ್ಯದಲ್ಲಿ ಸ್ಥಗಿತಗೊಳಿಸಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನಿಯಮಾವಳಿಯಂತೆ ಸ್ಟ್ಯಾಂಪ್ ಶುಲ್ಕ ಇತ್ಯಾದಿಗಳನ್ನು ಭೂ ಪರಿವರ್ತಿತ ಜಾಗವನ್ನು ೧೧–ಬಿ ಮೂಲಕ ಖರೀಸಿದವರಿಗೆ ನಮೂನೆ–೯ ಹಾಗೂ ೧೧–ಎ ನೀಡಲು ಯಾವ ಕ್ರಮ ವಹಿಸಲಾಗಿದೆ ;

(ಇ) ಇಲ್ಲವಾದಲ್ಲಿ, ನಮೂನೆ–೯ ಹಾಗೂ ೧೧–ಎ ಯನ್ನು ನೀಡಲು ಯಾವಾಗ ಕ್ರಮ ವಹಿಸಲಾಗುವುದು ?

## ಸರ್ಕಾರಿ ಪಿಂಚಣಿ ಯೋಜನೆ ನಿರ್ವಹಣೆ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೦ (೩೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾಶಾಸನ (ಪಿಂಚಣಿ) ಯೋಜನೆಯಡಿಯಲ್ಲಿ (ಸಂಧ್ಯಾ ಸುರಕ್ಷಾ, ವಿಧವಾ ವೇತನ ಇತ್ಯಾದಿ) ಮಾಶಾಸನ ಪಡೆಯುತ್ತಿರುವವರ ಸಂಖ್ಯೆ ಎಷ್ಟು ;

(ಆ) ಕಳೆದ ಕೆಲವು ತಿಂಗಳಿನಿಂದ ಸರ್ಕಾರ ನೀಡುತ್ತಿರುವ ಪಿಂಚಣಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಬಡವರಿಗೆ ಹಿರಿಯ ನಾಗರೀಕರಿಗೆ ತುಂಬಾ ಕಷ್ಟವಾಗಿದ್ದು, ಈ ಕುರಿತಂತೆ ಸರ್ಕಾರದ ನಿಲುವೇನು ?

## ಫಸಲ್ ಭೀಮಾ ಯೋಜನೆ ಕುರಿತ ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೧ (೩೩೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಫಸಲ್ ಭೀಮಾ ಯೋಜನೆಯು ರೈತರಿಗೆ ವಿಮೆ ನೀಡುವಲ್ಲಿ ಸಂಪೂರ್ಣ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಫಸಲ್ ಭೀಮಾ ಯೋಜನೆಯಲ್ಲಿ ರೈತರಿಗಿಂತ ವಿಮಾ ಕಂಪನಿಗಳೆ ಹೆಚ್ಚು ಲಾಭ ಮಾಡಿಕೊಂಡಿದ್ದು, ಯೋಜನೆಯ ಕ್ಲೇಮ್ ನೀಡಲು ಕಠಿಣ ಷರತ್ತುಗಳು ತಾಂತ್ರಿಕ ಸಮಸ್ಯೆ ಜಾಗೃತಿಯ ಕೊರತೆ ಮತ್ತು ಅಡ್ಡಿಗಳ ಕಾರಣಗಳಿಂದ ಸದರಿ ಯೋಜನೆಯು ದುರ್ಬಲವಾಗಿದ್ದು, ಯೋಜನೆಯು ಯಶಸ್ಸಿನ ನಿರೀಕ್ಷಿತ ಮಟ್ಟವನ್ನು ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸದರಿ ಯೋಜನೆಯನ್ನು ಯಶಸ್ವಿಗೊಳಿಸಿ ಪರಿಮಣಾಕಾರಿಯಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ಚಕ್ರನದಿ ದಂಡೆಯ ವ್ಯಾಪ್ತಿಯ ಮಾಹಿತಿ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೨ (೩೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲಾ ವ್ಯಾಪ್ತಿಯ ಕುಂದಾಪುರ ತಾಲ್ಲೂಕಿನ ಹರಿಯುವ ಚಕ್ರನದಿ ದಂಡೆ ವ್ಯಾಪ್ತಿಯ (Buffer Zone) ಎಷ್ಟು ಮೀಟರ್‌ವರೆಗೆ ಸರ್ಕಾರದ ಅಧೀನಕ್ಕೆ ಒಳಪಟ್ಟಿರುತ್ತದೆ ; (ವಿವರ ನೀಡುವುದು)

(ಆ) Coastal Regulation Act ಮತ್ತು The Rivers and Canals Act 1863 ದಲ್ಲಿನ ಉಲ್ಲೇಖದಂತೆ ತಿದ್ದುಪಡಿ ಒಳಗೊಂಡಂತೆ ವಿಸ್ತೃತ ಮಾಹಿತಿ ಒದಗಿಸುವುದು ;

(ಇ) ಖಾಸಗಿ ವ್ಯಕ್ತಿಗಳ ನದಿದಂಡೆ ವ್ಯಾಪ್ತಿಯನ್ನು ಆಕ್ರಮಿಸಿಕೊಂಡಿದ್ದಲ್ಲಿ ಯಾವ ಸಕ್ಷಮ ಪ್ರಾಧಿಕಾರವು ಆಕ್ರಮಿತ ಪ್ರದೇಶವನ್ನು ತೆರವುಗೊಳಿಸುವ ಅಧಿಕಾರ ಹೊಂದಿದೆ; (ವಿವರ ನೀಡುವುದು)

(ಈ) ಸದರಿ ನದಿ ದಂಡೆ ವ್ಯಾಪ್ತಿಯಲ್ಲಿ ಒತ್ತುವರಿ ಮಾಡಿ ನಕಲಿ ಮಾಹಿತಿ ನೀಡಿ ಅಕ್ರಮ–ಸಕ್ರಮದಡಿ ಮಂಜೂರಾತಿ ಮಾಡಿಕೊಂಡಿದ್ದಲ್ಲಿ ಕಾನೂನಿನ ಯಾವ ನಿಯಮಾವಳಿಯಡಿಯಲ್ಲಿ ತೆರವುಗೊಳಿಸಲು ಕ್ರಮ ಕೈಗೊಳ್ಳುವುದು ? (ಸಂಪೂರ್ಣ ವಿವರದೊಂದಿಗೆ ಮಾಹಿತಿ ಒದಗಿಸುವುದು)

## ಅವೈಜ್ಞಾನಿಕ ರಸ್ತೆ ಉಬ್ಬುಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೩ (೩೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಸ್ತೆಗಳಲ್ಲಿರುವ ಅನಗತ್ಯ ಮತ್ತು ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಮತ್ತು ರ್‍ಯಾಂಬ್ಲರ್ ಸ್ಟ್ರಿಪ್‌ಗಳನ್ನು ತೆಗೆದುಹಾಕಲು ಮತ್ತು ಅಂತರಾಷ್ಟ್ರೀಯ ಗುಣಮಟ್ಟಗಳಿಗೆ ಅನುಸಾರವಾಗಿ ಅವಶ್ಯಕತೆಯಿರುವಲ್ಲಿ ಮಾತ್ರ ಅವುಗಳನ್ನು ಅಳವಡಿಸಲು ಸುಪ್ರಿಂಕೋರ್ಟ್‌ನಿಂದ ಯಾವುದಾದರೂ ನಿರ್ದೇಶನವಿದೆಯೇ;

(ಆ) ಈ ಕುರಿತು ಸರ್ಕಾರದ ನಿಲುವೇನು ಮತ್ತು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ?

## ದಕ್ಷಿಣ ಕನ್ನಡ ಜಿಲ್ಲೆಯ ರಸ್ತೆಗಳು ಹದಗೆಟ್ಟಿರುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೪ (೩೨೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ರಸ್ತೆಗಳು ಯಾವುವು ; (ರಾಜ್ಯ ಮತ್ತು ಜಿಲ್ಲಾ ಹೆದ್ದಾರಿಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಲೋಕೋಪಯೋಗಿ ಇಲಾಖೆಯ ರಸ್ತೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಕಳೆದ ೨ ವರ್ಷದಲ್ಲಿ ಈ ರಸ್ತೆಗಳ ದುರಸ್ಥಿ ಕಾಮಗಾರಿಗಾಗಿ ನಿಗಧಿಪಡಿಸಿ, ಬಿಡುಗಡೆ ಮಾಡಿ, ವೆಚ್ಚವಾಗಿರುವ ಮೊತ್ತವೆಷ್ಟು ;

(ಈ) ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು; ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ?

## ಗ್ರಾಮೀಣ ಯೋಜನೆಯಡಿಯಲ್ಲಿ ವಸತಿ ಮಂಜೂರಾಗಿರುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೫ (೩೨೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ ಮತ್ತು ೨೦೨೦–೨೧ನೇ ಸಾಲಿನಲ್ಲಿ ಗ್ರಾಮೀಣ ಯೋಜನೆಯಡಿಯಲ್ಲಿ ವಸತಿ ಮಂಜೂರಾತಿ ಆಗಿರುವ ಮನೆಗಳ ಸಂಖ್ಯೆ ಎಷ್ಟು ;

(ಆ) ಗ್ರಾಮೀಣ ವಸತಿ ಯೋಜನೆಯಡಿಯಲ್ಲಿ ಫಲಾನುಭವಿಗಳ ಆಯ್ಕೆ ಮಾಡಲು ಇರುವ ಮಾನದಂಡಗಳೇನು ;

(ಇ) ನಗರ ಯೋಜನೆಯಡಿ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಮನೆ ಪೂರ್ಣಗೊಂಡಿವೆ; ಪೂರ್ಣಗೊಂಡಿರದಿದ್ದಲ್ಲಿ, ಅದಕ್ಕೆ ಕಾರಣಗಳೇನು ?

## ವಸತಿ ಯೋಜನೆ ಅಡಿಯಲ್ಲಿ ಮಂಜೂರಾದ ಮನೆಗಳನ್ನು ಪೂರ್ಣಗೊಳಿಸುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೬ (೩೨೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ಬೆಂಗಳೂರು ನಗರದಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಯೋಜನೆಯಡಿಯಲ್ಲಿ ಮಂಜೂರಾತಿ ಆಗಿರುವ ಮನೆಗಳ ಸಂಖ್ಯೆ ಎಷ್ಟು ;

(ಆ) ಮಂಜೂರಾತಿ ಆಗಿರುವ ಮನೆಗಳ ಪೈಕಿ ಎಷ್ಟು ಮನೆಗಳು ಪೂರ್ಣಗೊಂಡಿವೆ; ಹಾಗೂ ಪೂರ್ಣಗೊಂಡಿರದಿದ್ದಲ್ಲಿ ಕಾರಣವೇನು ?

## ರೈತರ ಜಮೀನಿನ ಖಾತೆ ಮಾಡುವ ಜೆ – ನಮೂನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೭ (೩೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಮೀನಿನ ಕ್ರಯ, ಮ್ಯುಟೇಷನ್, ಖಾತೆ ಬದಲಾವಣೆ ಪ್ರಕ್ರಿಯೆಯಲ್ಲಿ ಬರುವ J-Slip (ಜೆ–ನಮೂನೆ) ಎಂದರೇನು;ಇದಕ್ಕೆ ಕಾನೂನಿನಡಿಯಿರುವ ಮಹತ್ವವೇನು ; (ವಿವರವಾದ ಮಾಹಿತಿ ನೀಡುವುದು)

(ಆ) J-Slip (ಜೆ–ನಮೂನೆ) Un-processed Through Mutations ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಜ್ಯದಲ್ಲಿ ಸಾವಿರಾರು ರೈತರು ಈ ಹಿಂದೆ ಜಮೀನುಗಳನ್ನು ಕ್ರಯ ಮಾಡಿಸಿಕೊಂಡು ಖಾತೆ ಮಾಡಿಸಿಕೊಳ್ಳದೆ ಸದರಿ ಜಮೀನನ್ನು ಉಳುಮೆ ಮಾಡಿಕೊಂಡು ಬರುತ್ತಿದ್ದು, ಇವರಿಗೆ ಸದರಿ ಜಮೀನಿನ ಮಾಲೀಕತ್ವದ ಹಕ್ಕು ಇದೆಯೇ ಹಾಗೂ ಇದರ ಸಂಬಂಧ ತೆಗೆದುಕೊಂಡ ಕ್ರಮಗಳೇನು ; ಸರ್ಕಾರ ಇಂತಹ ಪ್ರಕರಣಗಳಿಗೆ ಯಾವ ರೀತಿ ನ್ಯಾಯ ಒದಗಿಸುವುದು;

(ಈ) ದಿನಾಂಕ: ೩೧.೦೫.೨೦೦೬ಕ್ಕಿಂತ ಹಿಂದೆ ನೋಂದಣಿಯಾದ ಜೆ–ನಮೂನೆಗಳನ್ನು ಭೂಮಿ ತಂತ್ರಾಂಶದಲ್ಲಿ ಅಳವಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರವಾದ ಮಾಹಿತಿ ಕೊಡುವುದು)

## ಕೃಷಿ ಇಲಾಖೆಯ ಆವರ್ತ ನಿಧಿ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮ (೩೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆವರ್ತ ನಿಧಿ ಎಂದರೇನು ; ಕೃಷಿ ಇಲಾಖೆಯಲ್ಲಿ ಆವರ್ತ ನಿಧಿ ಹಾಗೂ ಇತರೆ ನಿಧಿಗಳನ್ನು ಸರ್ಕಾರ ಸ್ಥಾಪಿಸಿದೆಯೇ ; ಸ್ಥಾಪಿಸಿದಲ್ಲಿ ಯಾವ ಯಾವ ನಿಧಿಗಳನ್ನು ಯಾವ ಉದ್ದೇಶಗಳಿಗಾಗಿ ಸ್ಥಾಪನೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನಿಧಿಗಳಿಂದ ಹಣವನ್ನು ಪಡೆದ ಏಜೆನ್ಸಿಗಳು, ಉದ್ಯಮಿಗಳು, ವ್ಯಾಪಾರಗಾರರು, ರೈತರು ಹಾಗೂ ಇತರರು ಯಾರ್ಯಾರು ; ಯಾವ ವರ್ಷಗಳಲ್ಲಿ ಎಷ್ಟು ಹಣವನ್ನು ಯಾವ ಉದ್ದೇಶಕ್ಕಾಗಿ ಪಡೆದುಕೊಂಡಿದ್ದಾರೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ನಿಧಿಗಳಿಂದ ಹಣವನ್ನು ಪಡೆಯಲು ಇರುವ ಮಾರ್ಗಸೂಚಿಗಳೇನು ; ಯಾರ್ಯಾರು ಪಡೆಯಬಹುದು ; (ವಿವರವಾದ ಮಾಹಿತಿ ಕೊಡುವುದು)

(ಈ) ಸದರಿ ಆವರ್ತ ಹಾಗೂ ಇತರೆ ನಿಧಿಗಳಲ್ಲಿ ಪಡೆದುಕೊಂಡ ಹಣವನ್ನು ಉದ್ಯಮಿದಾರರು ಹಾಗೂ ಇತರರು ಸರಿಯಾಗಿ ಪಾವತಿ ಮಾಡಿದ್ದಾರೆಯೇ ; ಮಾಡಿಲ್ಲವಾದರೆ, ಬಾಕಿ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಉ) ಇದರ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕೃಷಿ ವಿಮಾ ಯೋಜನೆಯ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೯ (೩೮೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಕೃಷಿ ವಿಮಾ ಯೋಜನೆ ಅಂದರೇನು ; ಇದನ್ನು ರಾಜ್ಯದಲ್ಲಿ ಯಾವಾಗಿನಿಂದ ಯಾರ ಸಹಯೋಗದೊಂದಿಗೆ ಜಾರಿಗೆ ತರಲಾಗಿದೆ ; ಇದರ ವ್ಯಾಪ್ತಿಯಲ್ಲಿ ಬರುವ ಬೆಳೆಗಳಾವುವು ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ೨೦೧೮–೧೯ರಿಂದ ೨೦೨೦–೨೧ ವರ್ಷಗಳಲ್ಲಿ ಎಷ್ಟು ರೈತರು ಕೃಷಿ ವಿಮಾಯೋಜನೆಯಲ್ಲಿ ನೊಂದಾಯಿಸಿಕೊಂಡಿದ್ದಾರೆ ; ಇವರು ವಿಮಾ ಕಂಪನಿಗೆ ಪಾವತಿಸಿರುವ ಹಣ ಎಷ್ಟು ; ರೈತರು ಈ ವಿಮೆಯಿಂದ ಪಡೆದ ಹಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ತುಮಕೂರು ಜಿಲ್ಲೆಯ ಗುಬ್ಬಿ ಹಾಗೂ ತುರುವೇಕೆರೆ ತಾಲ್ಲೂಕಿನ ಎಷ್ಟು ರೈತರು ಕೃಷಿ ವಿಮಾ ಯೋಜನೆಯಲ್ಲಿ ನೊಂದಾಯಿಸಿಕೊಂಡಿದ್ದಾರೆ ; ಇವರು ವಿಮಾ ಕಂಪನಿಗೆ ಪಾವತಿಸಿರುವ ಹಣ ಎಷ್ಟು ; ಈ ವಿಮೆಯಿಂದ ಎಷ್ಟು ಜನ ರೈತರಿಗೆ ಹಣ ಬಂದಿದೆ ? (ರೈತರ ಹೆಸರು, ವಿಳಾಸದೊಂದಿಗೆ ಹೋಬಳಿವಾರು ಮಾಹಿತಿ ನೀಡುವುದು)

## ಕಂದಾಯ ನಿವೇಶನಗಳ ನೋಂದಣಿ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೦ (೩೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ನಿವೇಶನ ಎಂದರೇನು ; ಕಾನೂನಿನಲ್ಲಿ ಇವುಗಳ ಮಾನ್ಯತೆ ಏನು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಂದಾಯ ನಿವೇಶನಗಳ ನೋಂದಣಿಯನ್ನು ಸ್ಥಗಿತಗೊಳಿಸಿರುವುದು ನಿಜವೇ ; ಆಗಿದ್ದರೆ, ಸ್ಥಗಿತಗೊಳಿಸಲು ಕಾರಣಗಳೇನು ; ಇದರಿಂದ ಸಾವಿರಾರು ಜನಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಸ್ಥಗಿತಗೊಳಿಸಿರುವ ಕಂದಾಯ ನಿವೇಶನಗಳ ನೋಂದಣಿಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು ;

(ಈ) ಕಂದಾಯ ನಿವೇಶನಗಳನ್ನು ನೋಂದಣಿ ಮಾಡಿಸಲು ಇರುವ ಮಾರ್ಗಸೂಚಿ ಹಾಗೂ ಷರತ್ತುಗಳೇನು ?

## ಬೆಳಗಾವಿ ಜಿಲ್ಲೆಯಲ್ಲಿನ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ನಿರ್ವಹಣೆ ಮತ್ತು ನಿರ್ಮಾಣದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೧ (೩೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳು ಅತಿವೃಷ್ಟಿ, ಪ್ರವಾಹದಿಂದಾಗಿ ತೀರಾ ಹದಗೆಟ್ಟಿದ್ದು ಕನಿಷ್ಠ ನಿರ್ವಹಣೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಸ್ತೆ ನಿರ್ಮಿಸಲು ಮತ್ತು ಸರಿಯಾದ ನಿರ್ವಹಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೭–೧೮, ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಹೆದ್ದಾರಿ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ ; ಈ ಯೋಜನೆಗೆ ಸರ್ಕಾರದಿಂದ ಮೀಸಲಿಟ್ಟಿದ್ದ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು; (ವಿವರ ಒದಗಿಸುವುದು)

(ಈ) ೨೦೧೭–೧೮, ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನಲ್ಲಿ ನಬಾರ್ಡ್, ೩೦೫೪, ಸಿಆರ್‌ಎಫ್, ಎಸ್.ಸಿ.ಪಿ. / ಟಿ.ಎಸ್.ಪಿ, ಅಪೆಂಡಿಕ್ಸ್ ಯೋಜನೆಗಳಡಿ ಬೆಳಗಾವಿ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಉ) ಇದರಲ್ಲಿ ಚಿಕ್ಕೋಡಿ–ಸದಲಗಾ ವಿಧಾನಸಭಾ ಕ್ಷೇತ್ರಕ್ಕೆ ೨೦೧೭–೧೮, ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನಲ್ಲಿ ಬಿಡುಗಡೆಯಾದ ಒಟ್ಟು ಅನುದಾನವೆಷ್ಟು ; ಸದರಿ ಕಾಮಗಾರಿಗಳು ಪೂರ್ಣಗೊಂಡಿವೆಯೇ ; ಇಲ್ಲದಿದ್ದಲ್ಲಿ, ಯಾವ ಹಂತದಲ್ಲಿದೆ? (ವಿವರ ಒದಗಿಸುವುದು)

## ಕೃಷಿ ಉತ್ಪಾದನೆಯನ್ನು ಹೆಚ್ಚಿಸಲು ಸಾಮರ್ಥ್ಯ ಅಭಿವೃದ್ಧಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೨ (೩೮೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೀರು ಮತ್ತು ಗೊಬ್ಬರಗಳ ಬಳಕೆಯ ದಕ್ಷತೆಯನ್ನು ಹೆಚ್ಚಿಸಲು ಮತ್ತು ಕೃಷಿ ಉತ್ಪಾದನೆಯನ್ನು ಹೆಚ್ಚಿಸಲು ಸಾಮರ್ಥ್ಯ ಅಭಿವೃದ್ಧಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಸರ್ಕಾರ ಹಾಕಿಕೊಂಡಿದೆಯೇ ;

(ಆ) ಈ ಉದ್ದೇಶಕ್ಕಾಗಿ ರಾಜ್ಯದಾದ್ಯಂತ ಅಭಿವೃದ್ಧಿಪಡಿಸಲಾದ ಪ್ರಾತ್ಯಕ್ಷಿಕೆಗಳು ಎಷ್ಟು ;

(ಇ) ಸದರಿ ಕಾರ್ಯಕ್ರಮವನ್ನು ಯಾವ ಯಾವ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಈ ಕಾರ್ಯಕ್ರಮದ ಉಪಯೋಗ ಪಡೆದುಕೊಂಡ ರೈತರ ಸಂಖ್ಯೆ ಎಷ್ಟು ?

## ಕೃಷಿ ಉಪಯೋಗಕ್ಕಾಗಿ "ಸಂಚಾರಿ ಹೆಲ್ತ್ ಕ್ಲಿನಿಕ್" ಸ್ಥಾಪಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೩ (೩೮೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿಯಲ್ಲಿ ಕಾಲಕಾಲಕ್ಕೆ ಮಣ್ಣು, ನೀರು ಪರೀಕ್ಷಿಸಲು ಮತ್ತು ಇತರೆ ತಾಂತ್ರಿಕ ನೆರವಿಗಾಗಿ "ಸಂಚಾರಿ ಕೃಷಿ ಹೆಲ್ತ್ ಕ್ಲಿನಿಕ್"ಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಈ ತರಹದ ಕ್ಲಿನಿಕ್‌ಗಳ ಉದ್ದೇಶಕ್ಕಾಗಿ ಮೀಸಲಿಡಲಾದ ಹಣವೆಷ್ಟು;

(ಇ) ಪ್ರಸಕ್ತ ಸಾಲಿನಲ್ಲಿ ಸದರಿ ಉದ್ದೇಶಕ್ಕಾಗಿ ಖರೀದಿಸಲಾದ ಉಪಯುಕ್ತ ವಾಹನಗಳು ಎಷ್ಟು ;

(ಈ) ಈ ಯೋಜನೆಯಡಿಯಲ್ಲಿ ಎಷ್ಟು ಹಳ್ಳಿಗಳಿಗೆ ಭೇಟಿ ನೀಡಿ ರೈತರಿಗೆ ಸಹಾಯ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಆಗಸ್ಟ್ ೨೦೧೯ರ ಅತಿವೃಷ್ಟಿಯಿಂದ ಮನೆ ಕಳೆದುಕೊಂಡವರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೪ (೩೬೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಆಗಸ್ಟ್ ೨೦೧೯ರಲ್ಲಿ ಉಂಟಾದ ಭಾರಿ ಮಳೆ (ಅತಿವೃಷ್ಟಿ)ಯಿಂದ ಹಾನಿಗೊಳಗಾದ ಮನೆಗಳ ಮರುನಿರ್ಮಾಣಕ್ಕೆ ಪರಿಹಾರ ಒದಗಿಸುವಲ್ಲಿ ನಡೆದಿರುವ

ಲೋಪದೋಷಗಳಿಂದಾಗಿ ಬಾಕಿ ಉಳಿದ ಅರ್ಹ ಫಲಾನುಭವಿಗಳು ನಿರಾಶ್ರಿತರಾಗಿ ಪರಿಹಾರಕ್ಕಾಗಿ ಅಲೆದಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬಾಕಿ ಉಳಿದ ನಿರಾಶ್ರಿತ ಅರ್ಹ ಫಲಾನುಭವಿಗಳಿಗೆ ಪರಿಹಾರ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ಒದಗಿಸುವುದು)

(ಇ) ಭಾರಿ ಪ್ರವಾಹದಿಂದ ಮನೆ ಕಳೆದುಕೊಂಡು ನೊಂದ ಅರ್ಹ ಫಲಾನುಭವಿಗಳು ಪರಿಹಾರಕ್ಕಾಗಿ ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಧರಣಿ ನಡೆಸಿದ್ದರೂ ಪರಿಹಾರ ಒದಗಿಸದೇ ಬಾಕಿ ಉಳಿಯಲು ಕಾರಣಗಳೇನು ; ಈ ಲೋಪದೋಷಗಳನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಕೆಲವು ಕಾರಣಾಂತರಗಳಿಂದ ನೊಂದ ಅರ್ಹ ಫಲಾನುಭವಿಗಳ ಬಾಕಿ ಉಳಿದ ಪರಿಹಾರಕ್ಕಾಗಿ ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ವರದಿ ಮಾಡಿದ್ದರೂ ಅವರಿಗೆ ಪರಿಹಾರ ಒದಗಿಸಲು ವಿಳಂಬ ಧೋರಣೆ ತಾಳಲು ಕಾರಣಗಳೇನು ;

(ಉ) ಬಾಕಿ ಉಳಿದ ನೊಂದ ಅರ್ಹ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಪರಿಹಾರ ಒದಗಿಸಲಾಗುವುದು ?

## ಉತ್ತರ ಕರ್ನಾಟಕ ಭಾಗದಲ್ಲಿ ಮೀನುಗಾರಿಕೆಗೆ ಪ್ರೋತ್ಸಾಹ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೫ (೩೬೨) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕದ ಭಾಗದಲ್ಲಿ ಮೀನು ಸಾಗಾಣಿಕೆ ಮತ್ತು ಸಂಸ್ಕರಣೆಗಳಿಗೆ ಸಾಕಷ್ಟು ಅನುಕೂಲಕರವಾದ ವಾತಾವರಣ ಹಾಗೂ ಜಲಸಂಪನ್ಮೂಲವಿದ್ದರೂ ಅದರ ಅಭಿವೃದ್ಧಿಗೆ ಸರ್ಕಾರ ಗಮನಹರಿಸದಿರಲು ಕಾರಣವೇನು ;

(ಆ) ಕರ್ನಾಟಕ ಮತ್ಸ್ಯ ವಿಕಾಸ ಯೋಜನೆಯಡಿಯಲ್ಲಿ ಮೀನುಗಾರಿಕಾ ತಾಂತ್ರಿಕತೆಯನ್ನು ಪ್ರೋತ್ಸಾಹಿಸಲು ಸರ್ಕಾರ ಯೋಜನೆ ಹಾಕಿಕೊಂಡಿದೆಯೇ ;

(ಇ) ಹಾಗಿದ್ದಲ್ಲಿ, ಈ ಯೋಜನೆಯಡಿಯಲ್ಲಿ ಉತ್ತರ ಕರ್ನಾಟಕದ ಭಾಗದಲ್ಲಿ ಯಾವ ಯಾವ ಸ್ಥಳಗಳಲ್ಲಿ ಜಾರಿಗೆ ತರಲು ಯೋಚಿಸಲಾಗಿದೆ ;

(ಈ) ಈ ಯೋಜನೆಯ ಅನುಷ್ಠಾನಕ್ಕಾಗಿ ಮೀಸಲಿಟ್ಟ ಹಣವೆಷ್ಟು ?

## ಪ್ರವರ್ಗ ೨(a) ಜಾತಿಯ ಹುದ್ದೆ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೬೬ (೩೦೦) ಮಾನ್ಯ ಮುಜರಾಯಿ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವರ್ಗ ೨(a)ನಲ್ಲಿ ೧೦೨ ಜಾತಿಗಳಿದ್ದು, ೧೫% ಮೀಸಲಾತಿ ಇದ್ದು, ಕಳೆದ ೨೫ ವರ್ಷಗಳಲ್ಲಿ ಇಲ್ಲಿರುವ ೧೦೨ ಜಾತಿಗಳಲ್ಲಿ ಯಾವ ಯಾವ ಜಾತಿಗೆ ಎಷ್ಟೆಷ್ಟು ಹುದ್ದೆಗಳು ಸಿಕ್ಕಿವೆ ; (ವಿವರ ನೀಡುವುದು)

(ಆ) ಕೆ.ಪಿ.ಎಸ್.ಸಿ. ಯಲ್ಲಿ ಈವರೆಗೂ ಪ್ರವರ್ಗ ೨(a)ನಲ್ಲಿ ಯಾವ ಯಾವ ಜಾತಿಗೆ ಎಷ್ಟೆಷ್ಟು ಪ್ರಾತಿನಿಧ್ಯ ಸಿಕ್ಕಿದೆ ? (ವಿವರ ನೀಡುವುದು)

## ದೇವರಾಜ ಅರಸು ಅಭಿವೃದ್ಧಿ ನಿಗಮದಲ್ಲಿ ನೆರವು ನೀಡಿರುವ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೬೭ (೨೯೭) ಮಾನ್ಯ ಮುಜರಾಯಿ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ದೇವರಾಜು ಅರಸು ಅಭಿವೃದ್ಧಿ ನಿಗಮದಲ್ಲಿ ಕಳೆದ ಹತ್ತು ವರ್ಷಗಳಿಂದ ಯಾವ ಯಾವ ಜಾತಿಗಳಿಗೆ ಎಷ್ಟೆಷ್ಟು ಸಾಲ, ಸಬ್ಸಿಡಿ, ನೆರವು, ತರಬೇತಿ ಸಿಕ್ಕಿದೆ ? (ವಿವರದ ಪಟ್ಟಿ ನೀಡುವುದು)

## ಹಿಂದುಳಿದ ವರ್ಗದವರಿಗೆ ಆಯವ್ಯಯದಲ್ಲಿ ವಿಶೇಷ ಅನುದಾನ ಘೋಷಿಸುವ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೬೮ (೨೯೮) ಮಾನ್ಯ ಮುಜರಾಯಿ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಹಿಂದುಳಿದ ವರ್ಗದವರ ಒಟ್ಟು ಜನಸಂಖ್ಯೆ ಎಷ್ಟು; ಇದೇ ರೀತಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಜನಸಂಖ್ಯೆ ಎಷ್ಟು ; ಹಾಗೂ ೨೦೨೦–೨೧ನೇ ಸಾಲಿನ ರಾಜ್ಯದಲ್ಲಿನ ಒಟ್ಟಾರೆ ಆಯವ್ಯಯದ ಕಾರ್ಯಕ್ರಮಗಳಿಗೆ ನಿಗಧಿಪಡಿಸಿರುವ ಅನುದಾನವೆಷ್ಟು ;

(ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಜನಸಂಖ್ಯೆ ಹಿಂದುಳಿದ ವರ್ಗಗಳ ಜನಸಂಖ್ಯೆಗಿಂತ ಕಡಿಮೆ ಇದ್ದರೂ ಅವರ ಅಭಿವೃದ್ಧಿಗಾಗಿ

ವಿಶೇಷ ಅನುದಾನ ನೀಡಿದಂತೆ ಹಿಂದುಳಿದ ವರ್ಗದವರಿಗೆ ವಿಶೇಷ ಅನುದಾನ ನೀಡದಿರಲು ಕಾರಣವೇನು?

## ಹಿಂದುಳಿದ ವರ್ಗದ ಪಟ್ಟಿಯಲ್ಲಿ ಪ್ರವರ್ಗಗಳ ಮೀಸಲಾತಿ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೭೯ (೨೯೯) ಮಾನ್ಯ ಮುಜರಾಯಿ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಹಿಂದುಳಿದ ವರ್ಗದ ಪಟ್ಟಿಯಲ್ಲಿ ಪ್ರವರ್ಗ – Iರಲ್ಲಿ ೯೫ ಜಾತಿಗಳಿದ್ದು, ಈ ಜಾತಿಗಳಿಗೆ ಕೇವಲ ೪% ಮೀಸಲಾತಿ ನೀಡಲಾಗಿದೆ ; ಆದರೆ ಪ್ರವರ್ಗ ೨(a)ನಲ್ಲಿ ೧೦೨ ಜಾತಿಗಳಿಗೆ ೧೫% ಮೀಸಲಾತಿ ಇದ್ದು ಈ ಎರಡು ಪ್ರವರ್ಗಗಳಲ್ಲಿರುವ ಮೀಸಲಾತಿ ವ್ಯತ್ಯಾಸ ೧೧ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣವೇನು ?

## ಖಾಲಿ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೭೦ (೨೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವಿಭಾಗ ವ್ಯಾಪ್ತಿಯ ಕಂದಾಯ ಇಲಾಖೆಯ ಅಧೀನದ ಕಛೇರಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಖಾಯಂ ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು ; ಇಲ್ಲವಾದಲ್ಲಿ, ನೇಮಕಾತಿ ವಿಳಂಬಕ್ಕೆ ಕಾರಣಗಳೇನು ?

## ಫುಡ್ ಕರ್ನಾಟಕ ಲಿಮಿಟೆಡ್ ಧ್ಯೇಯೋದ್ದೇಶದ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೧ (೩೫೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಫುಡ್ ಕರ್ನಾಟಕ ಲಿಮಿಟೆಡ್ ಎಂಬ ಸಂಸ್ಥೆಯು ಕೃಷಿ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ಸ್ಥಾಪನೆ ಮಾಡಿದ್ದು ಯಾವಾಗ, ಇದರ ಧ್ಯೇಯೋದ್ದೇಶಗಳೇನು ;

(ಇ) ರಾಜ್ಯದಲ್ಲಿ ಹಾಲಿ ಕೆಲಸ ನಿರ್ವಹಿಸುತ್ತಿರುವ ಫುಡ್ ಪಾರ್ಕ್ ಯಾವುವು ; ಇವುಗಳನ್ನು ಸ್ಥಾಪನೆ ಮಾಡಿರುವ ಉದ್ದೇಶ ಏನು;

(ಈ) ಫುಡ್ ಕರ್ನಾಟಕ ಲಿಮಿಟೆಡ್‌ನಿಂದ ಮೇಲ್ಕಂಡ ಫುಡ್ ಪಾರ್ಕ್‌ಗಳಿಗೆ ಯಾವುದೇ ಸಹಾಯ ಇಲ್ಲದೇ ವಿನಾಕಾರಣ ಫುಡ್ ಪಾರ್ಕ್‌ಗಳಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಫುಡ್ ಕರ್ನಾಟಕ ಲಿಮಿಟೆಡ್‌ನ, ಉದ್ದೇಶಗಳು ಇದುವರೆವಿಗೂ ಈಡೇರದೇ ಇರುವುದಕ್ಕೆ ಕಾರಣರಾಗಿರುವ ಅಧಿಕಾರಿಗಳು ಯಾರು; ಅಂತಹವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳು ಯಾವುವು ?

## ಪೋಡಿ ಪ್ರಕರಣಗಳ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೨ (೩೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಬಾಕಿ ಇರುವ ಪೋಡಿ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಕಂದಾಯ ಇಲಾಖೆಯಲ್ಲಿ ಪೋಡಿಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಹಾಗೂ ಕಳೆದ ೫ ವರ್ಷಗಳಿಂದ ರಾಜ್ಯದಲ್ಲಿ ಬಾಕಿ ಇರುವ ಪ್ರಕರಣಗಳು ಎಷ್ಟು ;

(ಇ) ಕಳೆದ ೫ ವರ್ಷಗಳಿಂದ ರಾಜ್ಯದ ಕಂದಾಯ ಇಲಾಖೆಯಲ್ಲಿ ಜಮೀನು ಪೋಡಿಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಹಾಗೂ ಈ ಸಂಬಂಧ ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು; (ವಿವರಗಳನ್ನು ತಾಲ್ಲೂಕುವಾರು, ಜಿಲ್ಲಾವಾರು ನೀಡುವುದು)

(ಈ) ಇಷ್ಟು ಪ್ರಮಾಣದಲ್ಲಿ ಪೋಡಿ ಪ್ರಕರಣಗಳು ಬಾಕಿ ಇರಲು ಕಾರಣವೇನು ;

(ಉ) ಬೆಂಗಳೂರು ನಗರ ಜಿಲ್ಲೆಯಲ್ಲಿ ಪೋಡಿಗಾಗಿ ಬಂದ ಅರ್ಜಿಗಳನ್ನು ವಿಲೇವಾರಿ ಮಾಡಲು ಸಂಬಂಧಪಟ್ಟ ಅಧಿಕಾರಿಗಳು ಲಕ್ಷಾಂತರ ರೂಪಾಯಿ ಬೇಡಿಕೆ ಇಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದರೆ, ಅಂತಹ ಪ್ರಕರಣಗಳು ಎಷ್ಟು ? (ವಿವರಗಳನ್ನು ನೀಡುವುದು)

## ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿರುವ ಸರ್ಕಾರಿ ಜಮೀನುಗಳ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೩ (೩೫೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕಿನ ವ್ಯಾಪ್ತಿಗೆ ಬರುವ ವಿಧಾನ ಸಭಾ ಕ್ಷೇತ್ರಗಳು ಯಾವುವು ; ಈ ಕ್ಷೇತ್ರಗಳಲ್ಲಿ ಸರ್ಕಾರಿ ಜಮೀನಿನ ವಿಸ್ತೀರ್ಣ ಎಷ್ಟು ; (ವಿವರಗಳನ್ನು ಕ್ಷೇತ್ರವಾರು ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಈ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಇಂತಹ ಸರ್ಕಾರಿ ಜಮೀನುಗಳನ್ನು ಖಾಸಗಿಯವರಿಗೆ ಪರಭಾರೆ ಮಾಡಿರುವ ಪ್ರಕರಣಗಳೆಷ್ಟು ; (ವಿವರಗಳನ್ನು ನೀಡುವುದು)

(ಇ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರು ಯಾರು ; (ಹೆಸರುಗಳನ್ನು ತಿಳಿಸುವುದು)

(ಈ) ಇಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರವು ಕೈಗೊಂಡ ಕ್ರಮಗಳೇನು ?

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಸಹಾಯಧನದ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೪ (೩೮೨) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಭವಿಷ್ಯಕ್ಕೋಸ್ಕರ ನೀಡಿರುವ ಸಹಾಯಧನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದರಿಂದ ಎಷ್ಟು ಜನ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಸಹಾಯವಾಗಿದೆ ? (ಹಿಂದುಳಿದ ವರ್ಗವಾರು ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸರ್ಕಾರಿ ಜಮೀನಿನ ಉದ್ದೇಶಗಳ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೫ (೩೫೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸರ್ಕಾರಿ ಜಮೀನು ಎಷ್ಟು; ಈ ಜಮೀನನ್ನು ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ ; (ವಿವರಗಳನ್ನು ನೀಡುವುದು)

(ಆ) ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಲು ಕೆಲ ಸರ್ಕಾರಿ ಅಧಿಕಾರಿಗಳು ಪ್ರಯತ್ನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಪೂರ್ಣ ವಿವರಗಳನ್ನು ನೀಡುವುದು ;

(ಈ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳನ್ನು ವಜಾ ಮಾಡಲು ವಿಳಂಬವಾಗಲು ಕಾರಣವೇನು ?

## ರಾಜ್ಯದಲ್ಲಿ ಫಾರಂ ೫೩ರ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೬ (೩೪೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಫಾರಂ ೫೩ ರಡಿ ಅರ್ಜಿ ಹಾಕಿದ ಪ್ರಕರಣಗಳೆಷ್ಟು ;

(ಆ) ಎಷ್ಟು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ; ಬಾಕಿ ಇರುವ ಪ್ರಕರಣಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಇತ್ಯರ್ಥಪಡಿಸಲು ವಿಳಂಬವಾಗಲು ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಇತ್ಯರ್ಥ ಪಡಿಸಲಾಗುವುದು ?

## ರಾಜ್ಯದ ವಿವಿಧ ಜಿಲ್ಲೆಗಳಿಗೆ ವಸತಿ ಯೋಜನೆಯಡಿಯಲ್ಲಿ ಬಿಡುಗಡೆಗೊಂಡ ಅನುದಾನದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೭ (೩೪೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಜಿಲ್ಲೆಗಳಿಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣಕ್ಕಾಗಿ ಪ್ರಸ್ತುತ ನೀಡುತ್ತಿರುವ ಹಣವೆಷ್ಟು ; (ವಿವರಗಳನ್ನು ನೀಡುವುದು)

(ಆ) ಸರ್ಕಾರ ಪ್ರಸ್ತುತ ನೀಡುತ್ತಿರುವ ಹಣದಲ್ಲಿ ಮನೆಗಳ ನಿರ್ಮಾಣ ಸಾಧ್ಯವಾಗದೇ ಫಲಾನುಭವಿಗಳು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಪ್ರಸ್ತುತ ನೀಡುತ್ತಿರುವ ಹಣವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು; ಮತ್ತು ಯಾವಾಗಿನಿಂದ ಜಾರಿಗೆ ತರಲಾಗುವುದು ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ನಿವೃತ್ತಿ ಅಧಿಕಾರಿಗಳನ್ನು ನೇಮಕ ಮಾಡಿಕೊಂಡಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೮ (೩೪೯) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದಿ: ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಭ್ರಷ್ಟಾಚಾರಕ್ಕೆ ಆಸ್ಪದವಾಗುವಂತೆ ಸರ್ಕಾರದ ನೀತಿ ಹಾಗೂ ಸುತ್ತೋಲೆಗಳ ವಿರುದ್ಧವಾಗಿ ನಿವೃತ್ತಿಗೊಂಡ ಅಧಿಕಾರಿಗಳನ್ನು ಪುನರ್ ನೇಮಕ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಿವೃತ್ತಿ ಅಧಿಕಾರಿಗಳನ್ನು ವಜಾಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವಾಗ ವಜಾಗೊಳಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಪುನರ್ ನೇಮಕಕ್ಕೆ ಕಾರಣೀಭೂತರಾದ ಅಧಿಕಾರಿಗಳ ವಿರುದ್ಧ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ( ಮಾಹಿತಿ ನೀಡುವುದು)

(ಈ) ಇಂತಹವರ ವಿರುದ್ಧ ಎಷ್ಟು ದಿನಗಳಲ್ಲಿ ಹಾಗೂ ಯಾವ ರೀತಿ ಕ್ರಮ ಕೈಗೊಳ್ಳಲಾಗುತ್ತದೆ ? (ಸಂಪೂರ್ಣ ವಿವರ ನೀಡುವುದು)

## ಜಾತ್ರೆ ಮತ್ತು ಉತ್ಸವಗಳಿಗೆ ಅನುಮತಿ ನೀಡುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೯ (೩೪೫) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:

(ಅ) ರಾಜ್ಯದಲ್ಲಿ ಕೊರೋನಾ ಪ್ರಕರಣಗಳು ತಗ್ಗಿದ್ದು, ದೇವಸ್ಥಾನದ ಜಾತ್ರೆ ಹಾಗೂ ಉತ್ಸವಗಳಿಗೆ ಅನುಮತಿ ನೀಡುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಆ) ರಾಜಕೀಯ ಪಕ್ಷಗಳು ಬೃಹತ್ ಸಮಾವೇಶಗಳನ್ನು ಆಯೋಜಿಸಲಾಗುತ್ತಿದ್ದು, ಮದುವೆ ಸಮಾರಂಭಗಳಿಗೂ ಅನುಮತಿ ನೀಡಲಾಗುತ್ತಿದೆ; ಆದರೆ ಈ ಕೋವಿಡ್ ನಿಯಮಗಳ ಸಡಿಲಿಕೆಯು ದೇವಸ್ಥಾನಗಳ ಜಾತ್ರೆ ಹಾಗೂ ಉತ್ಸವಗಳಿಗೆ ಅನ್ವಯಿಸದಿರಲು ಕಾರಣವೇನು ?

## ವಿಜಯಪುರ ಜಿಲ್ಲೆಯಲ್ಲಿ ಕೊಳಗೇರಿ ಅಭಿವೃದ್ಧಿ ನಿಗಮದಿಂದ ನೀಡಲಾದ ಮನೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೮೦ (೨೭೭) ಮಾನ್ಯ ವಸತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಿಜಯಪುರ ಜಿಲ್ಲೆಯಲ್ಲಿ ಕೊಳಗೇರಿ ಅಭಿವೃದ್ಧಿ ನಿಗಮದಿಂದ ನೀಡಲಾಗಿರುವ ಮನೆಗಳೆಷ್ಟು ? (ತಾಲ್ಲೂಕುವಾರು ನೀಡಲಾಗಿರುವ ಮನೆಗಳ ವಿವರ ಹಾಗೂ ಫಲಾನುಭವಿಗಳ ವಿವರ ಒದಗಿಸುವುದು)

## ವಸತಿ ಹಂಚಿಕೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೮೧ (೨೭೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳಿಂದ ವಸತಿಗಳನ್ನು ಹಂಚಲಾಗಿದೆ ;

(ಆ) ಇವುಗಳಲ್ಲಿ ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ; ಇನ್ನೂ ಬಾಕಿ ಇರುವ ವಸತಿಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ಒದಗಿಸುವುದು)

## ರಸ್ತೆ ಅಭಿವೃದ್ಧಿಪಡಿಸುವ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೮೨ (೨೭೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ವಿಜಯಪುರ ಜಿಲ್ಲೆಯಲ್ಲಿ ಎಷ್ಟು ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ ;

(ಆ) ಇವುಗಳಲ್ಲಿ ರಾಜ್ಯ ಹೆದ್ದಾರಿಗಳು, ಜಿಲ್ಲಾ ಹೆದ್ದಾರಿಗಳು ಹಾಗೂ ಇತರೆ ರಸ್ತೆಗಳು ಯಾವುವು ? (ತಾಲ್ಲೂಕುವಾರು ವಿವರ ಒದಗಿಸುವುದು)

## ಪಿ.ಎಂ.ಎ.ವೈ. ಗ್ರಾಮೀಣ ಯೋಜನೆಯಡಿ ಮಂಜೂರು ಮಾಡಲಾದ ಮನೆಗಳ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೮೩ (೨೮೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮ ರಿಂದ ಇಲ್ಲಿಯವರೆಗೂ ಪಿ.ಎಂ.ಎ.ವೈ. ಗ್ರಾಮೀಣ ಯೋಜನೆಯಡಿ ಮಂಜೂರು ಮಾಡಲಾದ ಮನೆಗಳ ಸಂಖ್ಯೆ ಎಷ್ಟು; ಪೂರ್ಣಗೊಂಡ ಮನೆಗಳು ಎಷ್ಟು ;

(ಆ) ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಬಿಡುಗಡೆ ಮಾಡಬೇಕಾದ ಅನುದಾನ ಎಷ್ಟು ; (ವಿವರ ಒದಗಿಸುವುದು)

(ಇ) ಜಾತಿವಾರು, ಸಮುದಾಯವಾರು ವಿವರ ನೀಡುವುದು ;

(ಈ) ಕ್ಷೇತ್ರವಾರು, ವರ್ಷವಾರು ಮಾಹಿತಿ ನೀಡುವುದು ?

## ಕೃಷಿ ಕ್ಷೇತ್ರ ಮತ್ತು ರೈತರಲ್ಲಿ ಭರವಸೆ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೪ (೨೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:

(ಅ) ಕೃಷಿ ಕ್ಷೇತ್ರ ಮತ್ತು ರೈತರಲ್ಲಿ ಭರವಸೆ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕೃಷಿ ಕ್ಷೇತ್ರಕ್ಕೆ ಉದ್ದಿಮೆ ಸ್ವರೂಪ ನೀಡುವ ಬಗ್ಗೆ ಸರ್ಕಾರದ ಯೋಜನೆಗಳೇನು ? (ಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ SCP/STP ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೫ (೩೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನ ಅಂತ್ಯಕ್ಕೆ ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ ಮತ್ತು ಎಸ್.ಟಿ.ಪಿ ಯೋಜನೆಯಡಿಯಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; (ವರ್ಷವಾರು ತಾಲ್ಲೂಕುವಾರು ಕಾಮಗಾರಿಗಳೊಂದಿಗೆ ವಿವರ ನೀಡುವುದು)

(ಆ) ಸದರಿ ಯೋಜನೆಗೆ ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಕೈಗೊಂಡಿದ್ದಲ್ಲಿ ಕಾಮಗಾರಿಯ ಸಂಪೂರ್ಣ ವಿವರ, ಪ್ರತ್ಯೇಕವಾಗಿ ಕಾಮಗಾರಿಗಳಿಗೆ ತಗುಲಿದ ವೆಚ್ಚ ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರು, ವಿಧಾನಸಭಾ ಕ್ಷೇತ್ರವಾರು, ವರ್ಷವಾರು ಸಂಪೂರ್ಣ ವಿವರ ಒದಗಿಸುವುದು ;

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳಲ್ಲಿ ಕೈಗೊಳ್ಳದೇ ಬೇರೆ ಬೇರೆ ಜನರಲ್ ಕಾಲೋನಿಗಳಲ್ಲಿ ಕಾಮಗಾರಿಗಳನ್ನು ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಸರ್ಕಾರಿ ಜಮೀನು ಒತ್ತುವರಿಯಾಗಿರುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೬ (೩೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ತಾಲ್ಲೂಕು ವ್ಯಾಪ್ತಿಯಲ್ಲಿ ಇರುವ ಒಟ್ಟು ಸರ್ಕಾರಿ ಜಮೀನು ಎಷ್ಟು ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಈ ಪೈಕಿ ಸರ್ಕಾರಿ ಜಮೀನು ಒತ್ತುವರಿಯಾಗಿರುವ ಪ್ರಕರಣಗಳು ಎಷ್ಟು ; (ವಿವರ ಒದಗಿಸುವುದು)

(ಇ) ಸದರಿ ಪ್ರಕರಣಗಳಲ್ಲಿ ಎಷ್ಟು ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲಾಗಿದೆ ; ಅವು ಯಾವುವು ಅವುಗಳನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸರ್ವೆ ನಂಬರ್‌ಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಉಳಿದ ಒತ್ತುವರಿ ಜಮೀನನ್ನು ತೆರವುಗೊಳಿಸಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿನ ರಾಷ್ಟ್ರೀಯ ಹೆದ್ದಾರಿಯ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೭ (೩೨೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿನ ರಾಷ್ಟ್ರೀಯ ಹೆದ್ದಾರಿಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ರಾಷ್ಟ್ರೀಯ ಹೆದ್ದಾರಿಗಳನ್ನು ಐ.ಆರ್.ಡಿ ಮಾನದಂಡಗಳ ರೀತ್ಯಾ ಅಭಿವೃದ್ಧಿಪಡಿಸಲಾಗಿದೆಯೇ; (ಸ್ಪಷ್ಟ ವಿವರ ಒದಗಿಸುವುದು)

(ಇ) ಬೀದರ್ ಜಿಲ್ಲೆಯಲ್ಲಿ ಹಾಯ್ದು ಹೋಗುವ ಯಾವ ಯಾವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಮೇಲ್ದರ್ಜೆಗೇರಿಸಲು ಕೇಂದ್ರ ಭೂ–ಸಾರಿಗೆ ಇಲಾಖೆ ತಾತ್ವಿಕ ಅನುಮೋದನೆ ದೊರಕಿದೆಯೇ; (ವಿವರ ನೀಡುವುದು)

(ಈ) ಇವುಗಳಿಗೆ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ ನೀಡಿ ಅಂತಿಮ ಅಧಿಸೂಚನೆ ಹೊರಡಿಸುವ ಕುರಿತು ಮಾಹಿತಿ ಒದಗಿಸುವುದು;

(ಉ) ಬೀದರ್‌ನಿಂದ ತೆಲಂಗಾಣ ರಾಜ್ಯದ ನಿಜಾಂಪೇಟೆವರೆಗಿನ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆಯೇ ; ಹಾಗಿದ್ದಲ್ಲಿ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಈ ರಸ್ತೆಯನ್ನು ಯಾವಾಗ ಅಭಿವೃದ್ಧಿ ಪಡಿಸಲಾಗುವುದು ?

## ಲೋಕೋಪಯೋಗಿ ಇಲಾಖೆಯಲ್ಲಿ ಮಂಜೂರಾಗಿರುವ ವಿವಿಧ ದರ್ಜೆಯ ಇಂಜಿನಿಯರ್‌ಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೮ (೩೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಮಂಜೂರಾಗಿರುವ ವಿವಿಧ ದರ್ಜೆಯ ಇಂಜಿನೀಯರ್‌ಗಳ ಹುದ್ದೆಗಳ ಸಂಖ್ಯೆ ಎಷ್ಟು (ವಲಯವಾರು ಪೂರ್ಣ ವಿವರ ನೀಡುವುದು)

(ಆ) ಪ್ರಸ್ತುತ ಸದರಿ ಹುದ್ದೆಗಳ ಪೈಕಿ ಖಾಲಿ ಇರುವ ಇಂಜಿನಿಯರ್‌ಗಳ ಸಂಖ್ಯೆ ಎಷ್ಟು ; (ದರ್ಜೆವಾರು, ವಲಯವಾರು ಮಾಹಿತಿ ನೀಡುವುದು)

(ಇ) ಲೋಕೋಪಯೋಗಿ ಇಲಾಖೆಯ ಗುತ್ತಿಗೆದಾರರ ಲೈಸೆನ್ಸ್ ನೀಡುವುದನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಯಾವಾಗ ಪ್ರಾರಂಭ ಮಾಡಲಾಗುವುದು ;

(ಈ) ಲೋಕೋಪಯೋಗಿ ಇಲಾಖೆಯ ಗುತ್ತಿಗೆದಾರರಾಗಲು ಇರುವ ಮಾನದಂಡಗಳೇನು ?

## ರೈತ ಸಿರಿ ಯೋಜನೆಯಲ್ಲಿ ಬೆಳೆಗಾರರನ್ನು ಉತ್ತೇಜಿಸುವ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೯ (೩೧೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತ ಸಿರಿ ಯೋಜನೆಯಲ್ಲಿ ಬೆಳೆಗಾರರನ್ನು ಉತ್ತೇಜಿಸಲು ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆ ಯಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಅನುದಾನ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಕಾರ್ಯಕ್ರಮದಡಿ ೨೦೨೦–೨೧ನೇ ಸಾಲಿನಲ್ಲಿ ಎಷ್ಟು ಹೆಕ್ಟೇರ್ ಸಿರಿಧಾನ್ಯ ಬೆಳೆಯಲು ಗುರಿ ನಿಗದಿ ಪಡಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಜಿಲ್ಲಾಧಿಕಾರಿಗಳ ಕಛೇರಿಯ ಕಂದಾಯ ಅಫೀಲುಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೦ (೩೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನೇಕ ಜಿಲ್ಲಾಧಿಕಾರಿಗಳ ಕಛೇರಿಯ ಅಸಂಖ್ಯಾತ ಕಂದಾಯ ಅಫೀಲು ಪ್ರಕರಣಗಳಿದ್ದರೂ ಜಿಲ್ಲಾಧಿಕಾರಿಗಳು ನಿಗಧಿತ ಸಮಯದಲ್ಲಿ ಮುತುವರ್ಜಿ ವಹಿಸಿ ಇತ್ಯರ್ಥ ಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೆ; ಬಂದಿದ್ದರೆ, ಅದನ್ನು ನಿಭಾಯಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಕಂದಾಯ ನ್ಯಾಯಾಲಯಗಳಲ್ಲಿನ ಪ್ರಕರಣಗಳನ್ನು ಶೀಘ್ರ ಇತ್ಯರ್ಥಪಡಿಸಲು ವಿಶೇಷ ರೆವಿನ್ಯೂ ನ್ಯಾಯಲಯಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದರೆ, ಎಷ್ಟು ದಿನದೊಳಗೆ ರಚಿಸಲಾಗುವುದು ?

## ಕಳೆದ ೩ ವರ್ಷಗಳಲ್ಲಿ ವಿವಿಧ ವಸತಿ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಮನೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧ (೩೦೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ವಿವಿಧ ವಸತಿ ಯೋಜನೆಗಳಡಿಯಲ್ಲಿ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು ; (ಪೂರ್ಣ ವಿವರಗಳನ್ನು ತಾಲ್ಲೂಕುವಾರು ನೀಡುವುದು)

(ಆ) ವಿವಿಧ ವಸತಿ ಯೋಜನೆಗಳಡಿ ಮಂಜೂರಾಗಿರುವ ಮನೆಗಳ ನಿರ್ಮಾಣಕ್ಕಾಗಿ ಸರ್ಕಾರ ಬಿಡುಗಡೆ ಮಾಡುತ್ತಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ವಿವಿಧ ಯೋಜನೆಗಳಡಿ ಮಂಜೂರು ಮಾಡಲಾಗುತ್ತಿರುವ ಮನೆಗಳಿಗೆ ಸರ್ಕಾರ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಹೆಚ್ಚಿಗೆ ಮಾಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ; ಎಷ್ಟು ಅನುದಾನವನ್ನು ಹೆಚ್ಚಿಗೆ ಮಾಡಲಾಗುವುದು ;

(ಈ) ಕಳೆದ ಮೂರು ವರ್ಷಗಳಿಂದ ಮಂಜೂರಾಗಿರುವ ಮನೆಗಳ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದೆಯೇ ; (ಗ್ರಾಮ ಪಂಚಾಯಿತಿವಾರು ಪ್ರಗತಿ ವರದಿ ನೀಡುವುದು)

(ಉ) ಪೂರ್ಣಗೊಳ್ಳದಿದ್ದಲ್ಲಿ; ಕಾರಣಗಳೇನು ಹಾಗೂ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯ ಅನುಷ್ಠಾನಗೊಳಿಸುವಲ್ಲಿ ಸರ್ಕಾರದ ವೈಫಲ್ಯದ ಕುರಿತು.

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೯೨ (೩೫೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಿಂದ ರಾಜ್ಯದಲ್ಲಿ ಒಟ್ಟು ಎಷ್ಟು ರೈತರು ಕೃಷಿ ಸಂಬಂಧಿತ ಕಾರಣಗಳಿಂದ ಆತ್ಮಹತ್ಯೆ ಮಾಡಿಕೊಂಡು ಜೀವ ಕಳೆದು ಕೊಂಡಿರುತ್ತಾರೆ ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯ ವಿಮೆ ಕಂತು ಪಾವತಿಸಿದರೂ ಸಹಾ ತಾವು ಬೆಳೆದ ಬೆಳೆಯು ನಾಶವಾಗಿ ಸರ್ಕಾರದಿಂದ ಬರತಕ್ಕಂತಹ ವಿಮೆಗಾಗಿ ಅರ್ಜಿ ಸಲ್ಲಿಸಿದರೂ ಸಹ ಹಲವು ರೈತರಿಗೆ ವಿಮೆ ಪರಿಹಾರ ದೊರಕದಿರುವ ಕುರಿತು ಮಾನ್ಯ ಉಚ್ಛ ನ್ಯಾಯಲಯದಿಂದ ಯಾವುದಾದರೂ ಸೂಚನೆಗಳನ್ನೂ ಸರ್ಕಾರಕ್ಕೆ ನೀಡಲಾಗಿದೆಯೇ; ನೀಡಿದ್ದಲ್ಲಿ, ವಿವರ ಹಾಗೂ ಈ ಕುರಿತು ಸರ್ಕಾರದ ಕ್ರಮವೇನು ;

(ಇ) ಅನ್ನದಾತರಿಗೆ ಸಹಾಯ ಮಾಡುವ ಉದ್ದೇಶದಿಂದ ಜಾರಿಗೆ ಬಂದಿರುವ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಸರ್ಕಾರದ ವೈಫಲ್ಯಕ್ಕೆ ಕಾರಣಗಳೇನು; ಮತ್ತು ಸರ್ಕಾರದ ಮುಂದಿನ ಕ್ರಮವೇನು ? (ವಿವರ ನೀಡುವುದು)

## ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರ ಜಮೀನುಗಳ ಕಬಳಿಕೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೯೩ (೩೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಸರ್ಕಾರಿ ಜಮೀನುಗಳು ಯಾವುವು; (ವಿವರವನ್ನು ಗ್ರಾಮವಾರು, ಸರ್ವೆವಾರು ವಿಸ್ತೀರ್ಣವಾರು ನೀಡುವುದು)

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಜಮೀನುಗಳ ಪ್ರದೇಶಗಳನ್ನು ಭೂಗಳ್ಳರು ಅತಿಕ್ರಮಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಎಷ್ಟು ವಿಸ್ತೀರ್ಣದ ಜಮೀನುಗಳನ್ನು ಅತಿಕ್ರಮಿಸಲ್ಪಟ್ಟಿವೆ; (ಗ್ರಾಮವಾರು, ಸರ್ವೆವಾರು, ವಿಸ್ತೀರ್ಣವಾರು ವಿವರ ನೀಡುವುದು)

(ಈ) ಈ ಅತಿಕ್ರಮಿಸಲ್ಪಟ್ಟ ಸರ್ಕಾರಿ ಸ್ವತ್ತುಗಳನ್ನು ಮರಳಿ ಪಡೆಯಲು ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ದೇವಸ್ಥಾನದ ಒತ್ತುವರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) :–**

೨೯೪ (೨೯೨) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆ ಆಲೂರು ತಾಲ್ಲೂಕು ಆಲೂರು ಗ್ರಾಮದ ಸರ್ವೆ ನಂ ೧೪೧ ರಿ.ಸ.ನಂ ೧೪೧/೪ರಲ್ಲಿ ಶ್ರೀ ತಿರುಮಲ ರಂಗನಾಥ ಸ್ವಾಮಿಯವರ ದೇವಸ್ಥಾನಕ್ಕೆ ಸೇರಿದ ಜಾಗವನ್ನು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಒತ್ತುವರಿ ಆಗಿರುವ ಜಾಗ ಎಷ್ಟು ; ಒತ್ತುವರಿದಾರರು ಯಾರು ;

(ಇ) ಒತ್ತುವರಿ ಆಗಿರುವ ಜಾಗವನ್ನು ಸರ್ವೆ ಮಾಡಿ. ಅಳತೆ ಮಾಡಿ ಕಲ್ಲುಕಂಬಗಳನ್ನು ನೆಟ್ಟಿದ್ದು ಯಾವಾಗ ;

(ಈ) ಅಳತೆ ಮಾಡಿ ಕಲ್ಲುಕಂಬಗಳನ್ನು ನೆಟ್ಟಿದ್ದರೂ ಈವರೆಗೆ ಒತ್ತುವರಿ ಪ್ರದೇಶವನ್ನು ತೆರವುಗೊಳಿಸಿ ದೇವಸ್ಥಾನಕ್ಕೆ ಹಸ್ತಾಂತರಿಸದೇ ಇರಲು ಕಾರಣಗಳೇನು; ಸದರಿ ಒತ್ತುವರಿ ಪ್ರದೇಶವನ್ನು ತೆರವುಗೊಳಿಸಿ ದೇವಸ್ಥಾನಕ್ಕೆ ಎಷ್ಟು ದಿನಗಳಲ್ಲಿ ಹಸ್ತಾಂತರಿಸಲಾಗುವುದು ?

## ಅಂಗವಿಕಲರ ಮಾಶಾಸನದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) :–**

೨೯೫ (೨೯೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂಗವಿಕಲ ಮಾಶಾಸನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು :

(ಆ) ಪ್ರಸ್ತುತ ಸರ್ಕಾರ ನೀಡುತ್ತಿರುವ ಅಂಗವಿಕಲರ ಮಾಶಾಸನ ಪ್ರಮಾಣ ಎಷ್ಟು;

(ಇ) ಕಳೆದ ೬-೭ ತಿಂಗಳಿಂದ ಮಾಶಾಸನ ಬಿಡುಗಡೆ ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಶೀಘ್ರ ಬಿಡುಗಡೆಗೆ ಸರ್ಕಾರ ಕೈಗೊಂಡ ಕ್ರಮಗಳೇನು (ತಿಳಿಸಿ)

## ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಭಕ್ತಾಧಿಗಳಿಗೆ ಅನುಕೂಲ ಕಲ್ಪಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ., (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೨೯೬ (೨೮೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆ ಚಾಮುಂಡಿ ಬೆಟ್ಟದಲ್ಲಿರುವ ಮುಜರಾಯಿ ದೇವಾಲಯಗಳು ಯಾವುವು; ಇಲ್ಲಿಗೆ ಬರುವ ಭಕ್ತಾಧಿಗಳಿಗೆ ಇಲಾಖೆ ವತಿಯಿಂದ ಒದಗಿಸಲಾಗಿರುವ ಅನುಕೂಲತೆಗಳು ಯಾವುವು; (ವಿವರ ನೀಡುವುದು)

(ಆ) ಇಲ್ಲಿಗೆ ಬರುವ ಭಕ್ತಾಧಿಗಳಿಗೆ ಕೈ-ಕಾಲುಗಳನ್ನು ತೊಳೆಯಲು ನೀರಿನ ಅನುಕೂಲತೆಯನ್ನು ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ ನೀರಿನ ಅನುಕೂಲತೆಯನ್ನು ಮಾಡಲು ಯಾವ ಕ್ರಮ ಕೈಗೊಳ್ಳಲಾಗುತ್ತದೆ ; (ವಿವರ ನೀಡುವುದು)

(ಇ) ದೇವರ ದರ್ಶನಕ್ಕೆ ಬೆಟ್ಟ ಹತ್ತಿ ಬರುವ ಭಕ್ತರಿಗೆ ತಿರುಪತಿಯ ಮಾದರಿಯಲ್ಲಿ ಶೀಘ್ರ ದರ್ಶನಕ್ಕೆ ಚೀಟಿ ನೀಡುವ ಪದ್ಧತಿ ಕೈಗೊಳ್ಳಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ಆದಿವಾಸಿ ಹಾಡಿಗಳಲ್ಲಿರುವ ಯಜಮಾನರುಗಳನ್ನು ಪೂಜಾರಿಗಳೆಂದು ಸೇರಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೨೯೭ (೨೮೫) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆದಿವಾಸಿ ಬುಡಕಟ್ಟು ಜನರಿಗೆ ಅವರ ಸಂಸ್ಕೃತಿಯನ್ನು ಉಳಿಸಿಕೊಂಡು ಮುಂದುವರೆಯಲು ಮತ್ತು ಅವರುಗಳು ಪೂಜಿಸುವ ದೇವರುಗಳನ್ನು, ನಂಬಿಕೆಗಳನ್ನು ಉಳಿಸಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು; (ವಿವರ ನೀಡುವುದು)

(ಆ) ಈ ಹಾಡಿಗಳಲ್ಲಿರುವ ದೇವರುಗಳನ್ನು ಪೂಜಿಸುವ ಮತ್ತು ಪೂಜೆಯನ್ನು ನಡೆಸುವ ಯಜಮಾನರುಗಳನ್ನು ಮುಜರಾಯಿ ಇಲಾಖೆಯ ಪೂಜಾರಿಗಳಿಗೆ ನೀಡುವ ಸೌಲಭ್ಯಗಳನ್ನು ನೀಡಲು ಸರ್ಕಾರದ ಕ್ರಮಗಳೇನು?(ವಿವರ ನೀಡುವುದು)

## ಕಲಂ ೩೭೧ (ಜೆ) ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೮ (೨೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷದಿಂದ ಕಲಬುರಗಿ ಜಿಲ್ಲೆಯಲ್ಲಿ ಕಲಂ ೩೭೧(ಜೆ) ರ ಅಡಿಯಲ್ಲಿ ಎಷ್ಟು ಅರ್ಹತಾ ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ ಮತ್ತು ಎಷ್ಟು ಅರ್ಜಿಗಳನ್ನು ತಿರಸ್ಕರಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಕಾರಣಕ್ಕೆ ಅರ್ಜಿಗಳನ್ನು ತಿರಸ್ಕರಿಸಲಾಗಿರುತ್ತದೆ ; (ವಿವರ ನೀಡುವುದು)

(ಇ) ತಿರಸ್ಕರಿಸಿದ ಅರ್ಜಿಗಳಲ್ಲಿ ಅಪೀಲು ಸಲ್ಲಿಸಿದ ಅರ್ಜಿಗಳೆಷ್ಟು; (ಅಪೀಲು ಸಲ್ಲಿಸಿದವರ ವಿವರ, ಅಪೀಲು ಸಲ್ಲಿಸಿದ ದಿನಾಂಕದ ವಿವರ ಸಲ್ಲಿಸುವುದು)

(ಈ) ಅಪೀಲು ಸಲ್ಲಿಸಿದ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳನ್ನು ಇತ್ಯರ್ಥಪಡಿಸಲಾಗಿದೆ ?

## ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಭೂಮಿಯನ್ನು ಕೃಷಿಯೇತರಗೊಳಿಸಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೯ (೨೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಭೂಮಿ ಮತ್ತು ಕೃಷಿಯೇತರ ಭೂಮಿ ಎಷ್ಟು ಹೆಕ್ಟೇರ್ ಇದೆ ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೦೩ ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಅಕ್ರಮ ಲೇಔಟ್‌ಗಳನ್ನು ನಿರ್ಮಿಸಲಾಗಿರುತ್ತದೆ ; ಮತ್ತು ಅಕ್ರಮ ಲೇಔಟ್ ನಿರ್ಮಿಸಿದವರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಇ) ಕೃಷಿ ಭೂಮಿಯನ್ನು ಕೃಷಿಯೇತರಗೊಳಿಸದೇ ನಿವೇಶನಗಳನ್ನು ನಿರ್ಮಿಸಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು ;

(ಈ) ಕಳೆದ ೦೩ ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಭೂಮಿಯನ್ನು ಕೃಷಿಯೇತರಗೊಳಿಸದೇ ಎಷ್ಟು ನಿವೇಶನಗಳನ್ನು ಮಾರಾಟ ಮಾಡಲಾಗಿರುತ್ತದೆ ?

## ಗೋಮಾಳ ಜಮೀನು ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೦೦ (೨೭೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಗೋಮಾಳ ಜಮೀನು ಲಭ್ಯವಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಜಮೀನುಗಳ ಮಂಜೂರಾತಿ ಮಾಡಲು ಅನುಸರಿಸುವ ಮಾನದಂಡಗಳೇನು ;

(ಇ) ಕಂದಾಯ ಇಲಾಖೆಗೆ ಸೇರಿದ ಭೂಮಿಯನ್ನು ಕೆಲವರು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ವಿಸ್ತೀರ್ಣ ಒತ್ತುವರಿಯಾಗಿರುತ್ತದೆ ;

(ಈ) ಒತ್ತುವರಿ ತೆರವುಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಜಮೀನುಗಳ ಭೂ ಸ್ವಾಧೀನ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೦೧ (೨೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟು ಜಮೀನುಗಳನ್ನು ಭೂ ಸ್ವಾಧೀನಪಡಿಸಿಕೊಳ್ಳಲಾಗಿದೆ ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ವಿಸ್ತೀರ್ಣದ ಜಮೀನುಗಳನ್ನು ರೈತರಿಂದ ನೇರ ಖರೀದಿ ಮಾಡಲಾಗಿರುತ್ತದೆ ; (ವಿವರ ನೀಡುವುದು)

(ಇ) ಭೂ ಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ಪರಿಹಾರ ನೀಡಲಾಗಿದೆಯೇ ? (ವಿವರ ನೀಡುವುದು)

## ಕೃಷಿಯಲ್ಲಿ ವಿವಿಧ ಗೊಬ್ಬರಗಳ ಬಳಕೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೦೨ (೩೦೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಕೃಷಿಯಲ್ಲಿ ನಾಡೆಪ್ (NADEP) ಕಾಂಪೋಸ್ಟಿಂಗ್, ವರ್ಮಿ ಕಾಂಪೋಸ್ಟಿಂಗ್, ದ್ರವ ಜೈವಿಕ ಗೊಬ್ಬರವನ್ನು ಬಳಸುವ ಮೂಲಕ ಕೃಷಿ ವೆಚ್ಚವನ್ನು ಕಡಿತಗೊಳಿಸುವ ಬಗ್ಗೆ ಯಾವುದಾದರೂ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ಈ ಗೊಬ್ಬರವನ್ನು ಬಳಸುವುದರ ಮೂಲಕ ಕೃಷಿ ಭೂಮಿ ಹೆಚ್ಚು ಫಲವತ್ತಾಗುತ್ತದೆ ಮತ್ತು ಹೆಚ್ಚಿನ ಇಳುವರಿಯನ್ನು ನೀಡುತ್ತದೆ ಎಂಬುದು ನಿಜವೇ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಇಂದಿನವರೆಗೆ ಪ್ರತಿ ಹೆಕ್ಟೇರ್‌ಗೆ ಬೆಳೆಗಳ ಸ್ಥಿತಿಯೇನು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೆಚ್ಚಿನ ಇಳುವರಿ ಪಡೆಯುತ್ತಿರುವ ರೈತರಿಗೆ ಪ್ರೋತ್ಸಾಹಧನ ನೀಡುವ ಮೂಲಕ ಸರ್ಕಾರ ರೈತರನ್ನು ಸನ್ಮಾನಿಸಿದೆಯೇ ? (ಜಿಲ್ಲಾವಾರು ರೈತರ ಸಂಖ್ಯೆ, ಹೆಸರು ನೀಡುವುದು)

## ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಅಡಿಯಲ್ಲಿ ವಸತಿ ನಿರ್ಮಾಣ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೦೩ (೩೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಅಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ನಿರ್ಮಿಸಲಾಗುತ್ತಿರುವ ಪ್ರತಿ ವಸತಿ ಘಟಕ ನಿರ್ಮಾಣ ವೆಚ್ಚವೆಷ್ಟು;

(ಆ) ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ನಿರ್ಮಾಣದ ವೆಚ್ಚವು ವಿಭಿನ್ನವಾಗಿದೆಯೇ; ಹಾಗಿದ್ದಲ್ಲಿ, ಎರಡೂ ಪ್ರದೇಶಗಳಿಗೆ ಹಂಚಿಕೆಯನ್ನು ಸಮನಾಗಿಸಲು ಯಾವುದಾದರೂ ಯೋಜನೆಯನ್ನು ರೂಪಿಸಲಾಗಿದೆಯೇ ;

(ಇ) ಉಭಯ ಪ್ರದೇಶಗಳ ನಿರ್ಮಾಣ ಸಾಮಗ್ರಿಗಳನ್ನು ಒಂದೇ ಸ್ಥಳದಿಂದ ತರುವುದರಿಂದ ಎರಡೂ ಪ್ರದೇಶಗಳ ಯೋಜಿತ ವೆಚ್ಚವನ್ನು ಅದೇ ನಿಯತಾಂಕಗಳಲ್ಲಿ ಅಳೆಯುವುದು ಸಾಧ್ಯವಾಗಿದ್ದು, ಈ ಬಗ್ಗೆ ಸರ್ಕಾರ ಪರಿಶೀಲಿಸುವುದೇ ?

## ಸಣ್ಣ ಬಂದರು, ಒಳನಾಡು ಜಲ ಸಾರಿಗೆ ಮತ್ತು ಕಡಲು ತೀರಗಳ ಅಭಿವೃದ್ಧಿ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೦೪ (೩೦೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಬಂದರು, ಒಳನಾಡು ಜಲ ಸಾರಿಗೆ ಮತ್ತು ಕಡಲ ತೀರಗಳ ಅಭಿವೃದ್ಧಿ ಬೆಳವಣಿಗೆಗೆ The Karnataka Maritime Board ನ್ನು ಸ್ಥಾಪಿಸಲಾಗಿದೆಯೇ ; ಹಾಗೂ ಈ ಬೋರ್ಡ್‌ಗೆ ಪದಾಧಿಕಾರಿಗಳನ್ನು ನೇಮಿಸಲಾಗಿದೆಯೇ ; (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ಬೃಹತ್ ಮತ್ತು ಸಣ್ಣ ಬಂದರುಗಳೆಷ್ಟು; ಈ ಬಂದರುಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಯಾವುದಾದರೂ ಅಭಿವೃದ್ಧಿ ಯೋಜನೆಗಳನ್ನು ತಯಾರಿಸಿದೆಯೇ; ಒಂದು ವೇಳೆ ತಯಾರಿಸಿದ್ದರೆ, ಈ ಯೋಜನೆಯನ್ನು ಯಾವ ಸಂಸ್ಥೆಯಿಂದ ತಯಾರಿಸಲಾಗಿದೆ ; ಈ ಯೋಜನಾ ವರದಿಯ ಸಂಕ್ಷಿಪ್ತ ವಿವರ ನೀಡುವುದು;

(ಇ) ಕೇಂದ್ರ ಸರ್ಕಾರದ 'ಸಾಗರ ಮಾಲಾ ಯೋಜನೆ' ಯಡಿ ಯಾವ ಯಾವ ಬಂದರುಗಳನ್ನು ಮತ್ತು ಕಡಲ ತೀರಗಳನ್ನು ಅಭಿವೃದ್ಧಿಪಡಿಸಲಾಗುತ್ತದೆ ? (ವಿವರ ನೀಡುವುದು)

## ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಜಮೀನುಗಳ ಪೋಡಿ ಮಾಡದಿರುವುದು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೦೫ (೩೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಮತ್ತು ದರ್ಖಾಸ್ತು ಮಂಜೂರಾದ ಅಂಶಿಕ ಜಮೀನುಗಳ ಖಾತೆದಾರರ ಪೋಡಿ ಮಾಡದೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವುದು

ಸಾಧ್ಯವಾಗದಿರುವ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದೆ ಇರಲು ಕಾರಣಗಳೇನು ;

(ಆ) ಜನ ಸಾಮಾನ್ಯರಿಗೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ನೆರವಾಗಲು ಪೋಡಿಮುಕ್ತ ಅಭಿಯಾನವನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಅಭಿಯಾನದಂತೆ ತುಮಕೂರು ಜಿಲ್ಲೆಯಲ್ಲಿ ಭೂಮಾಪನ ಕಾರ್ಯ ಪೂರ್ಣಗೊಂಡ ಗ್ರಾಮಗಳು ಯಾವುವು ; (ವಿವರಗಳನ್ನು ನೀಡುವುದು)

(ಇ) ಶಿರಾ ತಾಲ್ಲೂಕಿನಲ್ಲಿ ಭೂಮಾಪನಾ ಕಾರ್ಯ ಪೂರ್ಣಗೊಂಡ ಗ್ರಾಮಗಳಲ್ಲಿ ಖಾತೆದಾರರಿಗೆ ಪಹಣಿ ದಾಖಲಿಸಿ, ಪಹಣಿ ಪತ್ರ ನೀಡುವ ಕಾರ್ಯವನ್ನು ಪೂರ್ಣಗೊಳಿಸಲಾಗಿದೆಯೇ ? (ವಿವರಗಳನ್ನು ನೀಡುವುದು)

## ಪೋಡಿ ಮುಕ್ತ ಗ್ರಾಮ ಯೋಜನೆ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪುರ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೬ (೩೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೋಡಿ ಮುಕ್ತ ಗ್ರಾಮ ಮಾಡುವ ಯೋಜನೆಯು ಯಾವ ಹಂತದಲ್ಲಿದೆ; ೨೦೧೮–೧೯ನೇ ಸಾಲಿನಿಂದ ೨೦೨೦–೨೧ನೇ ಸಾಲಿನ ಅವಧಿಯಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿನ ಯಾವ ಯಾವ ಭಾಗಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ;

(ಆ) ಮೋಜಿನಿ ಹಾಗೂ ಪೋಡಿಗಾಗಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಎಷ್ಟು ದಿನಗಳಿಂದ ಬಾಕಿ ಉಳಿದಿರುತ್ತದೆ; ವಿಳಂಬಕ್ಕೆ ಕಾರಣಗಳೇನು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಅವುಗಳನ್ನು ಇತ್ಯರ್ಥಗೊಳಿಸುವ ಉದ್ದೇಶವು ಸರ್ಕಾರದ ಗಮನದಲ್ಲಿದೆಯೇ ; ಇದ್ದಲ್ಲಿ, ಯಾವಾಗ ಇತ್ಯರ್ಥಗೊಳಿಸಲಾಗುವುದು?

## ಮಾಜಿ ಸೈನಿಕರಿಗೆ ನೀಡಿದ್ದ ಹಕ್ಕು ಪತ್ರ ರದ್ದುಪಡಿಸಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭ (೩೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಪೈಸಾರಿ ಜಾಗವನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಾ ಬಂದಿರುವ ಜಾಗಕ್ಕೆ ಈಗಾಗಲೇ ವಿತರಿಸಿರುವ ಹಕ್ಕುಪತ್ರವನ್ನು ರದ್ದುಪಡಿಸಿರುವುದರಿಂದ, ಮಾಜಿ ಸೈನಿಕರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈಗಾಗಲೇ ನೀಡಿರುವ ಹಕ್ಕು ಪತ್ರಗಳನ್ನು ಏಕಾಏಕಿ ರದ್ದು ಮಾಡಲು ಕಾರಣಗಳೇನು ;

(ಇ) ಜಿಲ್ಲಾಡಳಿತದಿಂದ ಸೂಕ್ತ ಹಾಗೂ ವಿಸ್ತಾರವಾದ ವಿಚಾರಣೆ ಮಾಡಿ, ದೇಶ ಸೇವೆಗೆ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಮಾಜಿ ಸೈನಿಕರಿಗೆ ನ್ಯಾಯ ಒದಗಿಸಲು ಕ್ರಮ ವಹಿಸಲಾಗುವುದೇ ?

## ಕೊಡಗು ಜಿಲ್ಲೆಯಲ್ಲಿ ಗಿರಿಜನರಿಗೆ ಭೂಮಿ ಮಂಜೂರು ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೮ (೩೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಎಷ್ಟು ಗಿರಿಜನ ಫಲಾನುಭವಿಗಳಿಗೆ ಭೂಮಿಯನ್ನು ಮಂಜೂರು ಮಾಡಲಾಗಿದೆ ;

(ಆ) ಜಿಲ್ಲೆಯಲ್ಲಿ ಇದುವರೆಗೂ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿಯನ್ನು ಮಂಜೂರು ಮಾಡುವಂತೆ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ಸದರಿ ಅರ್ಜಿಗಳಲ್ಲಿ ಇದುರೆವಿಗೂ ವಿಲೇವಾರಿಯಾಗದೆ ಉಳಿದಿರುವ ಅರ್ಜಿಗಳೆಷ್ಟು ;

(ಈ) ಜಿಲ್ಲೆಯಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿ ಹಂಚಿಕೆ ಮಾಡುವಲ್ಲಿ ಅನಗತ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಯಾವ ಕಾಲಮಿತಿಯೊಳಗೆ ಸದರಿ ಗಿರಿಜನ ಫಲಾನುಭವಿಗಳಿಗೆ ಭೂಮಿ ಮಂಜೂರು ಮಾಡಿ, ಹಕ್ಕುಪತ್ರ ವಿತರಣೆ ಮಾಡಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದ ಭತ್ತದ ಕೊಯ್ಲು ಹಾಳಾಗಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೯ (೩೪೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ, ಈ ವರ್ಷ ಭತ್ತದ ಕೊಯ್ಲಿನ ಸಂದರ್ಭದಲ್ಲಿ ಅಕಾಲಿಕ ಮಳೆ ಸುರಿದು, ಭತ್ತದ ಕೊಯ್ಲು ಸಾಕಷ್ಟು

ಹಾಳಾಗಿರುವುದರಿಂದ, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ವರ್ಷದಲ್ಲಿ ಕೊಡಗು ಜಿಲ್ಲೆಯಲ್ಲಿ ಎಷ್ಟು ವಿಸ್ತೀರ್ಣದ ಭತ್ತದ ಕೊಯ್ಲು ಹಾನಿಗೊಳಗಾಗಿದೆ ಹಾಗೂ ಸದರಿ ನಷ್ಟದ ಅಂದಾಜಿನ ಸಂಪೂರ್ಣ ವಿವರಗಳೇನು ;

(ಇ) ಈ ಕಾರಣದಿಂದ ಆರ್ಥಿಕ ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರ ಕಲ್ಪಿಸಲಿರುವ ತಕ್ಷಣದ ಪರಿಹಾರ, ನೆರವು ಹಾಗೂ ಸೌಲಭ್ಯಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಸಂಕಷ್ಟದಲ್ಲಿರುವ ರೈತರಿಗೆ ಕೂಡಲೇ ನೆರವಾಗುವ ದೃಷ್ಟಿಯಿಂದ, ಬೆಂಬಲ ಬೆಲೆ ನೀಡುವ ಮೂಲಕ ಈ ವರ್ಷದ ಸಂಪೂರ್ಣ ಭತ್ತದ ಫಸಲನ್ನು ಖರೀದಿ ಮಾಡಲು ಸರ್ಕಾರ ಕ್ರಮ ವಹಿಸುವುದೇ ?

## ಕೊಡಗು ಜಿಲ್ಲೆಯಲ್ಲಿ ಸರ್ಕಾರಿ ಜಾಗ ಮಂಜೂರಾತಿಗಾಗಿ ಮಾಜಿ ಸೈನಿಕರು ಸಲ್ಲಿಸಿರುವ ಅರ್ಜಿಗಳು ಬಾಕಿ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೦ (೩೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಸರ್ಕಾರಿ ಜಾಗ ಮಂಜೂರಾತಿಗಾಗಿ ಮಾಜಿ ಸೈನಿಕರು ಸಲ್ಲಿಸಿರುವ ಹಲವು ಅರ್ಜಿಗಳು ದೀರ್ಘ ಕಾಲದಿಂದ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದುವರೆಗೂ ಸಲ್ಲಿಕೆಯಾದ ಅರ್ಜಿಗಳು ಎಷ್ಟು; ಎಷ್ಟು ವಿಲೇವಾರಿ ಆಗಿವೆ; ಎಷ್ಟು ವಿಲೇವಾರಿಯಾಗದೇ ಬಾಕಿ ಉಳಿದಿವೆ ;

(ಇ) ವಿಲೇವಾರಿಯಾಗದೇ ಅರ್ಜಿಗಳು ಈ ರೀತಿ ದೀರ್ಘ ಕಾಲದಿಂದ ಬಾಕಿ ಉಳಿದಿರಲು ಕಾರಣಗಳೇನು; (ಪ್ರಕರಣವಾರು ವಿವರಗಳನ್ನು ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ದೀರ್ಘ ಕಾಲದಿಂದ ಬಾಕಿ ಉಳಿದಿರುವ ಈ ಎಲ್ಲಾ ಅರ್ಜಿಗಳನ್ನು ವಿಲೇವಾರಿ ಮಾಡಿ, ದೇಶ ಸೇವೆಗೆ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಮಾಜಿ ಸೈನಿಕರಿಗೆ ನ್ಯಾಯ ಒದಗಿಸಿಕೊಡಲಾಗುವುದು ?

## ರಾಜ್ಯದಲ್ಲಿ ವಿವಿಧ ಉದ್ದೇಶಗಳಿಗಾಗಿ ಭೂ ಸ್ವಾಧೀನವಾದ ಕುರಿತು

**ಶ್ರೀ ಯು.ಬಿ. ವೆಂಕಟೇಶ (ನಾಮನಿರ್ದೇಶನ ಹೊಂದಿದವರು) :–**

೩೧೧ (೩೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಉದ್ದೇಶಗಳಿಗಾಗಿ ಭೂ ಸ್ವಾಧೀನ ಮಾಡಲಾದ ಭೂಮಿಗಳ ವಿವರಗಳನ್ನು ಪಹಣಿಯಲ್ಲಿ ದಾಖಲಿಸಲಾಗಿದೆಯೇ ;

(ಆ) ಪಹಣಿಯಲ್ಲಿ ದಾಖಲಿಸಲು ಬಾಕಿ ಇರುವ ಪ್ರಕರಣಗಳೆಷ್ಟು ;

(ಇ) ಎಷ್ಟು ದಿನಗಳೊಳಗೆ ದಾಖಲಿಸಲಾಗುವುದು ?

## ರಾಜ್ಯದಲ್ಲಿರುವ ಜಾತಿಗಳ ಸಂಖ್ಯೆ ಕುರಿತು

**ಶ್ರೀ ಯು.ಬಿ.ವೆಂಕಟೇಶ (ನಾಮನಿರ್ದೇಶನ ಹೊಂದಿದವರು) :–**

೩೧೨ (೩೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿ ಇರತಕ್ಕಂಥ ಜಾತಿಗಳು ಎಷ್ಟು; ಎಲ್ಲಾ ಜಾತಿಗಳು ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಸಮೀಕ್ಷೆ ನಡೆಸಲಾಗಿದೆಯೇ;

ಆ) ಸಮೀಕ್ಷೆ ಆಧಾರದ ಮೇಲೆ ನಿಗಮಗಳನ್ನು ರಚನೆ ಮಾಡಲಾಗುತ್ತಿದೆಯೇ; ಅದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಮಂಜೂರಾತಿ ತಡವಾಗುತ್ತಿರುವ ಕುರಿತು.

**ಶ್ರೀ ಯು.ಬಿ. ವೆಂಕಟೇಶ (ನಾಮನಿರ್ದೇಶನ ಹೊಂದಿದವರು) :–**

೩೧೩ (೩೫೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಹಂಚಿಕೆ ಮಾಡಿ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ೪೫ ದಿನಗಳು ಕಳೆದರೂ ಜಿಲ್ಲಾಧಿಕಾರಿಗಳ ಕಛೇರಿಯಿಂದ ಬಿಡುಗಡೆ ಆದೇಶ ಹೊರಡಿಸಲು ತಡವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಂದಾಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಗ್ರಾಮ ಸಹಾಯಕರ ಬಗ್ಗೆ

**ಡಾ: ಚಂದ್ರಶೇಖರ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) :_**

೩೧೪ (೩೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ಎಷ್ಟು ಜನ ಗ್ರಾಮ ಸಹಾಯಕರು ಕಾರ್ಯನಿರ್ವಹಿಸುತ್ತಿದ್ದಾರೆ; ಅವರೆಲ್ಲರೂ ಖಾಯಂ ಗೊಂಡಿದ್ದಾರೆಯೇ;

(ಆ) ಕಂದಾಯ ಗ್ರಾಮ ಸಹಾಯಕರ ಖಾಯಂಯಾತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಸಂಬಂಧಿಸಿದ ಅಭಿವೃದ್ಧಿ ಕಾಮಗಾರಿಗಳು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೫ (೨೮೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಕಾರವಾರ ವಿಭಾಗಕ್ಕೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಒಳಪಡುವ ರಸ್ತೆಗಳು, ಕಟ್ಟಡಗಳು ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಹಾಳಾಗಿರುವ ರಸ್ತೆಗಳು ಮತ್ತು ಕಟ್ಟಡಗಳ ವಿವರಗಳನ್ನು ನೀಡುವುದು ;

(ಆ) ಕಾರವಾರ ವಿಭಾಗದ ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಒಳಪಡುವ ರಸ್ತೆಗಳು ಹಾಗೂ ಕಟ್ಟಡಗಳ ನಿರ್ಮಾಣ ಹಾಗೂ ನವೀಕರಣ ದುರಸ್ಥಿಗಾಗಿ ಕಳೆದ ೫ ವರ್ಷಗಳಲ್ಲಿ ಸರ್ಕಾರದಿಂದ ಬಂದ ಅನುದಾನ ಎಷ್ಟು; ಅದಕ್ಕೆ ಖರ್ಚು ಮಾಡಿದ ಹಣ ಎಷ್ಟು ? (ವಿವರ ನೀಡುವುದು, ಕಾಮಗಾರಿಯ ಸಂಪೂರ್ಣ ಮಾಹಿತಿಯೊಂದಿಗೆ ಅಂದಾಜು ಪತ್ರಿಕೆಯ ಪ್ರತಿಯೊಂದಿಗೆ ಸವಿಸ್ತಾರ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹಿಂಗಾರು ಬೆಳೆಯ ಸಮೀಕ್ಷೆ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೬ (೩೫೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂಗಾರು ಬೆಳೆ ಸಮೀಕ್ಷೆ ನಡೆಯುತ್ತಿದೆಯೇ;

(ಆ) ಈವರೆವಿಗೆ ಎಷ್ಟು ರೈತರು ಹಿಂಗಾರು ಬೆಳೆ ಸಮೀಕ್ಷೆಯಲ್ಲಿ ಪಾಲ್ಗೊಂಡಿದ್ದಾರೆ;

(ಇ) ಬೆಳೆ ಸಮೀಕ್ಷೆಗೆ ನಿಗಧಿಪಡಿಸಿದ ಗುರಿ, ಗಳಿಸಿದ ಸಾಧನೆಯ ಪೂರ್ಣ ವಿವರಗಳನ್ನು ಒದಗಿಸುವುದು ?

(ಉತ್ತರವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲು ವಿನಂತಿಸಿದೆ)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಹದಿಂದ ಹದಗೆಟ್ಟ ರಸ್ತೆಗಳ ಬಗ್ಗೆ.

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭(೨೮೪) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇತ್ತೀಚೆಗೆ ಸುರಿದ ಮಳೆ–ಪ್ರವಾಹದಿಂದ ರಸ್ತೆ ಸೇತುವೆಗಳಿಗೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಆಗಿರುವ ಹಾನಿ ಎಷ್ಟು; ಸಮಗ್ರ ಮಾಹಿತಿ ನೀಡುವುದು;

(ಇ) ಹಾನಿಗೊಳಗಾಗಿರುವ ರಸ್ತೆ – ಸೇತುವೆ ದುರಸ್ಥಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು; ಅದಕ್ಕಾಗಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೃಷಿ ಇಲಾಖೆಯ ಖಾಲಿ ಹುದ್ದೆಗಳ ಬಗ್ಗೆ.

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೮ (೨೮೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೃಷಿ ಇಲಾಖೆಯಲ್ಲಿ ಹೆಚ್ಚಿನ ಪ್ರಮಾಣದ ಹುದ್ದೆಗಳು ಖಾಲಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕಛೇರಿಗಳಿಗೆ ಮಂಜೂರಾಗಿರುವ ಹುದ್ದೆಗಳು, ಭರ್ತಿಯಾಗಿರುವ ಹುದ್ದೆಗಳು ಹಾಗೂ ಖಾಲಿಯಾಗಿರುವ ಹುದ್ದೆಗಳು ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೃಷಿ ಹೊಂಡಗಳ ಬಗ್ಗೆ.

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೯ (೨೮೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೃಷಿಭಾಗ್ಯ ಯೋಜನೆಯಡಿ ಒಣಭೂಮಿ ರೈತರಿಗೆ ಸಂರಕ್ಷಿತ ನೀರು ಒದಗಿಸಲು ಎಷ್ಟು ಕೃಷಿ ಹೊಂಡಗಳನ್ನು ಸ್ಥಾಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಸ್ಥಾಪಿಸಿದ ಕೃಷಿ ಹೊಂಡಗಳಿಗೆ ಎಷ್ಟು ಸಹಾಯಧನವನ್ನು ನೀಡಲಾಗಿದೆ? (ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯಲ್ಲಿ ಭ್ರಷ್ಟಾಚಾರ ಕುರಿತು.

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)**

೩೨೦ (೩೧೭) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ೫೦ ಕೋಟಿಗೂ ಹೆಚ್ಚಿನ ೭೭೧ ಕಾಮಗಾರಿಗಳ ತುಂಡುಗುತ್ತಿಗೆ ಹಗರಣ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಲೋಕೋಪಯೋಗಿ ಇಲಾಖೆಯ ಕೇಂದ್ರ ಕಚೇರಿ ಅವರಣದಲ್ಲೇ ಇರುವ ನಂ.೬ನೇ ಕಟ್ಟಡಗಳ ಉಪ ವಿಭಾಗದಲ್ಲಿ ಒಂದೇ ಕಾಮಗಾರಿಯನ್ನು ವಿಭಜಿಸಿ ಒಂದೇ ಗುತ್ತಿಗೆದಾರರಿಗೆ ತುಂಡು ಗುತ್ತಿಗೆ ನೀಡುವ ಮೂಲಕ ಕೆಪಿಟಿಪಿ ಕಾಯ್ದೆಯ ಉಲ್ಲಂಘಿಸಿ ಅವ್ಯವಹಾರ ನಡೆಸಿ ಭ್ರಷ್ಟಾಚಾರವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ತುಂಡುಗುತ್ತಿಗೆ ಮಾಡಿ ಸರಕಾರಕ್ಕೆ ನಷ್ಟ ಉಂಟು ಮಾಡಿದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

## ಬಹುಮಹಡಿ ವಸತಿ ಕಟ್ಟಡಗಳ ಮಾಲೀಕರ ಸಂಘದ ನೋಂದಣಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)**

೩೨೧ (೩೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳು ಉಪನೋಂದಣಾಧಿಕಾರಿ ಕಛೇರಿಯಲ್ಲಿ ನೊಂದಣಿಯಾಗಿವೆ; (ವಿಭಾಗವಾರು ಮಾಹಿತಿ ನೀಡುವುದು)

(ಆ) ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಣಿಯಾಗಿರುವ ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳಿಗೆ ನೋಂದಣಿಯಾಗಿರುವ ಕುರಿತು ಪ್ರಮಾಣ ಪತ್ರ ನೀಡಲಾಗುತ್ತಿದೆಯೆ; ಇಲ್ಲವಾದಲ್ಲಿ, ನೋಂದಣಿಯಾದ ಕುರಿತು ಪ್ರಮಾಣ ಪತ್ರ ನೀಡದಿರಲು ಕಾರಣಗಳೇನು;

(ಇ) ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳು ಉಪನೋಂದಣಾಧಿಕಾರಿಯವರ ಕಛೇರಿಯಲ್ಲಿ ನೋಂದಣಿಯಾಗಿರುವ ಕುರಿತು ಪ್ರಮಾಣ ಪತ್ರ ನೀಡದೇ

ಇರುವುದರಿಂದ ಅಂತಹ ಸಂಘಗಳಿಗೆ ತೆರಿಗೆಗಾಗಿ ಪಾನ್ ಕಾರ್ಡ್ ಪಡೆಯಲು ಹಾಗೂ ಬ್ಯಾಂಕಿನಲ್ಲಿ ಸಂಘದ ಹೆಸರಿನಲ್ಲಿ ಖಾತೆ ತೆರೆಯಲು ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು;

(ಈ) ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳು ಉಪನೋಂದಣಾಧಿಕಾರಿಯವರ ಕಛೇರಿಯಲ್ಲಿ ನೋಂದಣಿಯಾಗಿರುವ ಕುರಿತು ಪ್ರಮಾಣ ಪತ್ರವನ್ನು ಎಂದಿನಿಂದ ನೀಡಲಾಗುವುದು; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ನಿಗದಿ ಪಡಿಸಿದ ಮೊತ್ತಕ್ಕಿಂತ ಕಡಿಮೆ ಮೊತ್ತಕ್ಕೆ ನೋಂದಣಿ ಮಾಡುವ ಕುರಿತು.

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)**

೩೨೨ (೩೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ಆಸ್ತಿ ಖರೀದಿ ಮತ್ತು ಮಾರಾಟದ ಎಷ್ಟು ಪ್ರಕ್ರಿಯೆಗಳು ನೋಂದಣಿಯಾಗಿವೆ; ವಿಭಾಗವಾರು ಮಾಹಿತಿ ನೀಡುವುದು ಇದರಿಂದ ಸಂಗ್ರಹವಾದ ರಾಜಸ್ವ ಮೊತ್ತವೆಷ್ಟು;

(ಆ) ಕೇಂದ್ರ ಮೌಲ್ಯ ಮಾಪನ ಸಮಿತಿಯಿಂದ ನಿಗದಿ ಪಡಿಸಿದ ಮೊತ್ತಕ್ಕಿಂತ ಕಡಿಮೆ ಮೊತ್ತಕ್ಕೆ ನೋಂದಣಿ ಮಾಡಿಸಿಕೊಳ್ಳುವ ಅಧಿಕಾರ ಉಪನೋಂದಣಾಧಿಕಾರಿಗಳಿಗೆ ಇದೆಯೇ; ಬೆಳೆಗಾವಿ ಉಪನೋಂದಣಾಧಿಕಾರಿಯವರು ೨೦೧೮ ರಲ್ಲಿ ಸರ್ವೆ ಸಂ ೩೯೨೮,೩೯೨೯, ೩೯೨೯/೧,೩೯೨೯/೨, ಮತ್ತು ೩೯೨೯/೫ ನ್ನು ಕಡಿಮೆ ದರಕ್ಕೆ  ನೋಂದಣಿ ಮಾಡುವ ಮೂಲಕ

ಸರಕಾರಕ್ಕೆ ರೂ. ೯.೫೬ ಕೋಟಿ ಮುದ್ರಾಂಕ ಶುಲ್ಕ ನಷ್ಟ ಉಂಟು ಮಾಡಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಇ) ಸರಕಾರಕ್ಕೆ ನಷ್ಟವಾದ ರೂ.೯.೫೬ ಕೋಟಿ ಮುದ್ರಾಂಕ ಶುಲ್ಕವನ್ನು ಸಂಬಂಧಿತ ಅಧಿಕಾರಿಯಿಂದಲೇ ವಸೂಲಿ ಮಾಡಲು ಯಾವ ಕ್ರಮ ಕೈಗೊಂಡಿದೆ; ಸದರಿ ಅಧಿಕಾರಿಯನ್ನು ಅಮಾನತ್ತು ಮಾಡಲಾಗಿದೆಯೇ; ಈ ಕುರಿತು ಸರಕಾರದ ನಿಲುವೇನು?

## ಮೇವು ಖರೀದಿಯಲ್ಲಿ ಅಕ್ರಮವಾಗಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)**

೩೨೩ (೩೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬರ ನಿರ್ವಹಣೆಗಾಗಿ ಬಿಡುಗಡೆ ಮಾಡಲಾದ ಅನುದಾನದಿಂದ ಗೋಶಾಲೆಗಳಿಗೆ ಮೇವು ಖರೀದಿಯಲ್ಲಿ ಅಕ್ರಮವಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಆ) ಚಾಮರಾಜನಗರ ಕೊಳ್ಳೆಗಾಲದ ತಹಶೀಲ್ದಾರರವರು ೨೦೧೭–೧೮ನೇ ಸಾಲಿನಲ್ಲಿ ಪ್ರತಿ ಟನ್ ರೂ.೧,೫೦೦ ಪಾವತಿ ಮಾಡುವ ಬದಲು ರೂ.೬೦೦೦ ಪಾವತಿ ಮಾಡಿ ಮೇವು ಖರೀದಿಸಿ ಭ್ರಷ್ಟಾಚಾರ ಎಸಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ಈ ಕುರಿತು ಸರಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಕಳೆದ ೫ ವರ್ಷಗಳಲ್ಲಿ ಮೇವು ಖರೀದಿಸಲು ಸರಕಾರ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮೇವು ಖರೀದಿಸಲು ಸರಕಾರ ಟನ್ ಒಂದಕ್ಕೆ ನಿಗದಿ ಪಡಿಸಿದ ಮೊತ್ತವೆಷ್ಟು; ಎಷ್ಟು ಟನ್ ಮೇವನ್ನು ಖರೀದಿಸಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸರಕಾರಿ ಜಾಗದಲ್ಲಿರುವ ಅಕ್ರಮ ರೆಸಾರ್ಟ್‌ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)**

೩೨೪ (೩೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ ಬಿಡದಿ ಹೋಬಳಿ ಶಾನಮಂಗಲ ಬಿಲ್ಲಕೆಂಪನ ಹಳ್ಳಿ ಮತ್ತು ಬಾನಂದೂರು ಗ್ರಾಮಗಳಲ್ಲಿ ಸರಕಾರದ ೧೦೬ ಎಕರೆ ೧೨ ಗುಂಟೆ ಜಮೀನು ಒತ್ತುವರಿಯಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಒತ್ತುವರಿ ತೆರವುಗೊಳಿಸಲು ಸರಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಆ) ಸರಕಾರಿ ಜಾಗವನ್ನು ಒತ್ತವರಿ ಮಾಡಿಕೊಂಡು ರೆಸಾರ್ಟ್ ನಿರ್ಮಿಸಿದಲ್ಲಿ ಅಲ್ಲಿ ಯಾವ ನಿಯಮಗಳ ಅನ್ವಯ ವ್ಯವಹಾರಕ್ಕೆ ಅನುಮತಿ ನೀಡಲಾಗಿದೆ;

(ಇ) ಅಕ್ರಮವಾಗಿ ಒತ್ತುವರಿ ಮಾಡಿದ ಜಾಗದಲ್ಲಿ ವ್ಯವಹಾರಗಳನ್ನು ಮಾಡುತ್ತಿರುವ ರೆಸಾರ್ಟ್‌ಗಳನ್ನು ಬಂದ್ ಮಾಡುವ ಕುರಿತು ಸರಕಾರದ ನಿಲುವೇನು; ಕಳೆದ ಎರಡು ವರ್ಷಗಳಲ್ಲಿ ಎಷ್ಟು ರೆಸಾರ್ಟ್‌ಗಳನ್ನು ಬಂದ್ ಮಾಡಲಾಗಿದೆ?

## ಮೈಸೂರು–ಹೆಗ್ಗಡದೇವನಕೋಟೆ ರಸ್ತೆಯನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨೫ (೨೮೯) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಮುಖ ರಾಜ್ಯ ಹೆದ್ದಾರಿ ಮೈಸೂರು–ಹೆಗ್ಗಡದೇವನಕೋಟೆ ರಸ್ತೆಯಲ್ಲಿ ವಾಹನ ಸಂಚಾರ ಅಧಿಕವಾಗಿದ್ದು, ಇದನ್ನು ಚತುಷ್ಪಥ ರಸ್ತೆಯನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಸದರಿ ರಸ್ತೆ ಕಿರಿದಾಗಿದ್ದು, ತಿರುವುಗಳಿಂದ ಕೂಡಿದ್ದು, ಸಂಚಾರದ ಒತ್ತಡ ಹೆಚ್ಚಾಗಿ ವಾಹನಗಳ ಸುಗಮ ಸಂಚಾರಕ್ಕೆ ತೊಂದರೆಯಾಗಿರುವುದು ಅಲ್ಲದೆ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿರುವುದರಿಂದ ಈ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಬಿಳಿಗಿರಿ ರಂಗನ ಬೆಟ್ಟದ ದೇವಾಲಯದ ಜೀರ್ಣೋದ್ದಾರ ಕಾಮಗಾರಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨೬ (೨೮೮) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಳಿಗಿರಿ ರಂಗನ ಬೆಟ್ಟದ ದೇವಾಲಯಗಳ ಜಿರ್ಣೋದ್ದಾರದ ಕಾರ್ಯ ಯಾವಾಗ ಆರಂಭವಾಯಿತು; ಇದಕ್ಕೆ ಮಂಜೂರಾಗಿ ಬಿಡುಗಡೆಯಾಗಿರುವ ಅನುದಾನ ಎಷ್ಟು; ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ; ಬಾಕಿ ಉಳಿದಿರುವ ಕಾಮಗಾರಿಗಳು ಯಾವುವು ;

(ಆ) ಇದುವರೆಗೆ ಖರ್ಚಾಗಿರುವ ಅನುದಾನ ಎಷ್ಟು; ಇನ್ನೂ ಎಷ್ಟು ಅನುದಾನದ ಅವಶ್ಯಕತೆ ಇದೆ; ನಾಲ್ಕೂ ವರ್ಷಗಳಾದರೂ ಕಾಮಗಾರಿ ಪೂರ್ಣಗೊಳ್ಳದೇ ಇರಲು ಕಾರಣಗಳೇನು; ಈ ವರ್ಷ ಕಾಮಗಾರಿಗಳನ್ನು ಪೂರೈಸಿ ಜಾತ್ರೆ ಉತ್ಸವಗಳಿಗೆ ಅವಕಾಶ ಮಾಡಿಕೊಡಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–132/400 ಪ್ರತಿಗಳು/28–01–2021